ಸಂಪುಟ : 9 ಸಂಚಿಕೆ 247 ಪುಟ : 4 ಬೆಲೆ: 3.00 ರವಿವಾರ ನವೆಂಬರ್ 10 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 247 Pages : 4 Price : 3.00 Sunday November 10 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ವಕ್ಫ್ ವಿರುದ್ಧ ರಾಸ್ತಾ ರೋಖೋ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕೋಟುಮಚಗಿ, ನಾರಾಯಣಪುರ ಗ್ರಾಮದಲ್ಲಿ ರೈತರು ಶ್ರೀ ಸೋಮೇಶ್ವರ ಸದ್ಭಕ್ತ ಮಂಡಳಿಯೊಂದಿಗೆ ನ. 11ರ ಮುಂಜಾನೆ 10 ಗಂಟೆಗೆ ವೇ.ಮೂ. ಗಂಗಾಧರಯ್ಯ ಹಿರೇಮಠ ಹಾಗೂ ವೇ.ಮೂ. ಫಕೀರಯ್ಯಜ್ಜ ಹಿರೇಮಠರ ನೇತೃತ್ವದಲ್ಲಿ ಗ್ರಾಮದ ಶ್ರೀ ಸೋಮೇಶ್ವರ ದೇವಸ್ಥಾನದಿಂದ ಪ್ರತಿಭಟನಾ ರ‍್ಯಾಲಿ ಮುಖಾಂತರ ಪಾಲಾ–ಬದಾಮಿ ಹೆದ್ದಾರಿಯನ್ನು ಬಂದ್ ಮಾಡಿ ರಾಸ್ತಾ ರೋಖೋ ಚಳುವಳಿ ಮುಖಾಂತರ ವಕ್ಫ್ ವಿರುದ್ಧ ಪ್ರತಿಭಟಿಸಲಾಗುವುದೆಂದು ಭಜರಂಗದಳ ಸಂಯೋಜಕ ಮುತ್ತು ಶಿಂಗಟಾಲಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶರಣ ಸಂಗಮ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನ.10ರಂದು ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1619ನೇ ಶರಣ ಸಂಗಮದಲ್ಲಿ ಶಿವಶರಣೆಯರ ವಚನಗಳ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ, ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣತತ್ವ ಚಿಂತಕ ಮೃತ್ಯುಂಜಯ ಆರ್.ಜಿನಗಾ ವಚನ ಚಿಂತನೆ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಮಕ್ಕಳಲ್ಲಿ ಪ್ರಜಾಪ್ರಭುತ್ವದ ಅರಿವು ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಬ್ಲಾಕ್ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಸ್ವೀಪ್ ಸಮಿತಿ ಶಿರಹಟ್ಟಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ, ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ ಇವರ ಸಹಯೋಗದಲ್ಲಿ ಶನಿವಾರ ಶಿರಹಟ್ಟಿ ಬ್ಲಾಕ್ ಮಟ್ಟದ ಪ್ರಬಂಧ, ಪೋಸ್ಟರ್ ಡಿಸೈನ್ ಹಾಗೂ ರಸಪ್ರಶ್ನೆ ಸ್ಪರ್ಧೆಯನನು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.4ರಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ತಾಲೂಕು ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ. ಹೊಸಮನಿ ಮಾತನಾಡಿ, ಇಂದಿನ ವಿದ್ಯಾರ್ಥಿಗಳೇ ಮುಂದಿನ ಮತದಾರರು. ಅವರಲ್ಲಿ ಮತದಾನದ ಬಗ್ಗೆ ಹಾಗೂ ಪ್ರಜಾಪ್ರಭುತ್ವ ಬಗ್ಗೆ ಅರಿವು ಮೂಡಿಸಲು ಇಂಥ ಸ್ಪರ್ಧೆಗಳು ಸಹಾಯಕಾರಿ ಎಂದು ಹೇಳಿದರು.

ಪ್ರಾಸ್ತಾವಕವಾಗಿ ಮಾತನಾಡಿದ ಬಿಆರ್‌ಪಿ ಈಶ್ವರ್ ಮೆಡ್ಲೇರಿ, ಸ್ಪರ್ಧೆಯ ರೂಪರೇಷಗಳ ಕುರಿತು ವಿದ್ಯಾರ್ಥಿಗಳಿಗೆ ವಿವರಣೆ ನೀಡಿ, ಇಂತಹ ಸ್ಪರ್ಧೆಗಳಿಂದ ಮಕ್ಕಳಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲು ಸಹಕಾರಿ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಭಾರಿ ಮುಖ್ಯೋಪಾಧ್ಯಾಯ ಆರ್.ಬಿ. ಜೋಶಿ ವಹಿಸಿದ್ದರು. ಎಂ.ಆರ್. ಹಿರೇಮಠ, ಆರ್.ಬಿ. ಕುಲಕರ್ಣಿ, ಶಶಿಕಲಾ ಉಪಸ್ಥಿತರಿದ್ದರು. ಉರ್ದು ಸಿಆರ್‌ಪಿ ಎನ್.ಎ. ಮುಲ್ಲಾ ಸ್ವಾಗತಿಸಿದರು ಸಿಆರ್‌ಪಿ ಜೆ.ಎಸ್. ಗಾಯಕವಾಡ, ಎನ್.ಎನ್. ಸಾವಿರ ಕುರಿ, ಉಮೇಶ್ ನೇಕಾರ ನಿರೂಪಿಸಿದರು. ಸುಮಾರು 25 ಶಾಲೆಗಳ 70ಕ್ಕೂ ಅಧಿಕ ವಿದ್ಯಾರ್ಥಿಗಳು, ಶಿಕ್ಷಕರು ಭಾಗವಹಿಸಿದ್ದರು.

### 'ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ' ಕಾರ್ಯಕ್ರಮದಲ್ಲಿ ನ್ಯಾ. ಬಸವರಾಜ

# ಬಡವರಿಗೆ ಉಚಿತ ಕಾನೂನು ನೆರವು

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರ ಮಟ್ಟದಿಂದ ತಾಲೂಕು ಮಟ್ಟದವರೆಗೆ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯನಿರ್ವಹಿಸುತ್ತಿದ್ದು, ಈ ಮೂಲಕ ಜನರಲ್ಲಿ ಕಾನೂನು ಅರಿವು ಮೂಡಿಸುವುದರ ಜೊತೆಗೆ ಬಡವರಿಗೆ, ನಿರ್ಗತಿಕರಿಗೆ ಉಚಿತವಾಗಿ ಕಾನೂನು ನೆರವನ್ನು ನೀಡುತ್ತಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ನುಡಿದರು.

ಅವರು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ ಹಾಗೂ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ಸಂವಿಧಾನದಲ್ಲಿ ಅಶಕ್ತರು, ದುರ್ಬಲರು ಸೇರಿದಂತೆ ಎಲ್ಲರಿಗೂ ಕಾನೂನು ಸೇವೆ ದೊರೆಯಬೇಕು ಎಂಬ ಆಶಯ ಇದೆ. ಆ ಆಶಯವನ್ನು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನೆರವೇರಿಸುತ್ತಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ



ಮಾತನಾಡಿ, 1995ನೇ ನ. 9ರಂದು ದೇಶದಲ್ಲಿ ಲೀಗಲ್ ಸರ್ವೀಸ್ ಆ್ಯಕ್ಟ್ ಜಾರಿಗೆ ಬಂದಿದ್ದು, ಈ ಹಿನ್ನೆಲೆಯಲ್ಲಿ ಪ್ರತಿ ವರ್ಷ ನ. 9ರಂದು ದೇಶಾದ್ಯಂತ ಕಾನೂನು ಸೇವೆಗಳ ದಿನಾಚರಣೆ ಆಚರಿಸಲಾಗುತ್ತದೆ. ಕಾನೂನು ಸೇವೆಗಳ ಪ್ರಾಧಿಕಾರದ ವ್ಯಾಪ್ತಿ ಬಹಳ ವಿಶಾಲವಾಗಿದ್ದು, ಇದು ಜನರಲ್ಲಿ ನಿರಂತರವಾಗಿ ಲೀಗಲ್ ಏಡ್ ಕ್ಲಿನಿಕ್‌ಗಳ ಮೂಲಕ ಉಚಿತವಾಗಿ ಕಾನುನು ಸಲಹೆಗಳನ್ನು ನೀಡುತ್ತಾ ಬಂದಿದೆ. ಪ್ರಾಧಿಕಾರದಲ್ಲಿ ಪ್ಯಾನಲ್ ವಕೀಲರು, ಹಾಗೂ ಕಾನೂನು ನೆರವು ಅಭಿರಕ್ಷಕರನ್ನು ನೇಮಿಸಿಕೊಂಡು ಬಡವರಿಗೆ, ಮಹಿಳೆಯರಿಗೆ ಉಚಿತವಾಗಿ ಕಾನೂನು ನೆರವು ನೀಡುತ್ತಿದೆ ಎಂದು ಪ್ರಾಧಿಕಾರದ ಬಗ್ಗೆ ವಿವರಿಸಿದರು. ಯಾವುದೇ ವ್ಯಾಜ್ಯ ನ್ಯಾಯಾಲಯದ ಎದುರು ಬಂದಾಗ ವಾದ–ವಿವಾದಗಳನ್ನು ಆಲಿಸಿ ತೀರ್ಪು ನೀಡಲಾಗುತ್ತದೆ. ತೀರ್ಪು ಬರಲು ಹೆಚ್ಚಿನ ಸಮಯ ಬೇಕಾಗುತ್ತದೆಯಾದರೂ ಪ್ರಕರಣದಲ್ಲಿ ಕೊನೆಗೆ ಒಬ್ಬರ ಗೆಲುವು, ಇನ್ನೊಬ್ಬರ ಸೋಲಾಗುತ್ತದೆ. ಆದರೆ ಎರಡೂ ಕಕ್ಷಿದಾರರ ಒಪ್ಪಿಗೆಯಿಂದ ಲೋಕ್ ಅದಾಲತ್‌ನಲ್ಲಿ ರಾಜೀ ಸಂಧಾನಕ್ಕೆ ಮುಂದಾಗಿ ಪ್ರಕರಣ ಬಗೆಹರಿಸಿಕೊಂಡರೆ ಇಬ್ಬರೂ ಗೆಲ್ಲುತ್ತಾರೆ. ಜತೆಗೆ ವ್ಯಾಜ್ಯಗಳ ಸಂಖ್ಯೆ ಕಡಿಮೆಯಾಗುತ್ತದೆ, ಸಾಕಷ್ಟು ಸಮಯ ಉಳಿಯುತ್ತದೆ ಎಂದರು.

ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿಪಾಟೀಲ ಮಾತನಾಡಿ, ಬಡವರು, ನಿರ್ಗತಿಕರು, ಮಹಿಳೆಯರು ನ್ಯಾಯದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಕಾನೂನು ಸೇವೆಗಳ ಪ್ರಾಧಿಕಾರವನ್ನು ರಚಿಸಲಾಗಿದೆ. ಈ ಮೂಲಕ ಕಾನೂನು ಅರಿವು ಹಾಗೂ ನೆರವನ್ನು ನೀಡುತ್ತಿದ್ದು, ಇದರ ಸದುಪಯೋಗ ಪಡೆಯಬೇಕು ಎಂದರು.

ಪ್ರಾ. ಜೈಹನುಮಾನ ಎಚ್.ಕೆ. ಮಾತನಾಡಿ, ಸಮಾಜದ ದುರ್ಬಲರು ನ್ಯಾಯದಿಂದ ವಂಚಿತರಾಗಬಾರದು. ಇದರಲ್ಲಿ ಕಾನೂನು ವಿದ್ಯಾರ್ಥಿಗಳ ಪಾತ್ರ ಪ್ರಮುಖವಾಗಿದೆ. ವಿದ್ಯಾರ್ಥಿ ಹಂತದಿಂದಲೇ ದುರ್ಬಲರಿಗಾಗಿ ಸಹಾನುಭೂತಿ ಹೊಂದುವ ಮೂಲಕ ಅವರಿಗೆ ನ್ಯಾಯ ದೊರಕಿಸಲು ಮುಂದಾಗಿ, ತಮ್ಮ ವ್ಯಕ್ತಿತ್ವ ವಿಕಸನಗೊಳಿಸಬೇಕು ಎಂದರು.

ಶರತಕುಮಾರ ಪ್ರಾರ್ಥಿಸಿದರು. ಅಧ್ಯಾಪಕರಾದ ಜ್ಯೋತಿ ಸಿ.ವಿ. ಸ್ವಾಗತಿಸಿದರು. ಪ್ರೊ. ವಿ.ವಿ. ಮುರದಂಡೆ ವಂದಿಸಿದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಕಾನೂನು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> ಮುಖ್ಯ ಕಾನೂನು ನೆರವು ಅಭಿರಕ್ಷಕರಾದ ಎಸ್.ವಿ. ಗ್ರಾಮಪುರೋಹಿತ ಮಾತನಾಡಿ, ನಮ್ಮ ಸಂವಿಧಾನದಲ್ಲಿ ಸರ್ವರಿಗೂ ನ್ಯಾಯ ದೊರಕಬೇಕು ಎಂಬ ಆಶಯ ಇದೆ. ಅದು ನಮ್ಮ ಮೂಲಭೂತ ಹಕ್ಕು ಕೂಡ ಆಗಿದೆ. ಈ ಹಿನ್ನೆಲೆಯಲ್ಲಿ ಕಾನೂನು ಸೇವೆಗಳ ಕಾಯ್ದೆ ಜಾರಿಗೆ ಬಂದಿದೆ. ಪ್ರಾಧಿಕಾರದಿಂದ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳಲ್ಲಿ ಬಡವರಿಗೆ ನೆರವನ್ನು ನೀಡುತ್ತಿದೆ. 2022ರಲ್ಲಿ ಎಲ್.ಎ.ಡಿ.ಸಿ ಪ್ರಾರಂಭಿಸಿ, ಅದರ ಮೂಲಕ ಸೇವೆ ನೀಡುತ್ತಿದೆ ಎಂದರು.

# ಬೊಮ್ಮಾಯಿ ಕುಟುಂಬ ಜನರ ಸೇವೆಗೆ ಮೀಸಲು: ಶಂಕರ ಪಾಟೀಲ್ ಮುನೇನಕೊಪ್ಪ

■ ವಿಜಯಸಾಕ್ಷಿ ಸುದ್ದಿ, ಶಿಗ್ಗಾವಿ

ಬೊಮ್ಮಾಯಿ ಕುಟುಂಬ ಜನರ ಸೇವೆಗೆ ಮೀಸಲು ಎಂದು ಭರತ್ ಬೊಮ್ಮಾಯಿ ಉಪ ಚುನಾವಣೆಗೆ ಸ್ಪರ್ಧಿಸಿದ್ದಾರೆ ಎಂದು ಬಿಜೆಪಿ ಮುಖಂಡ ಶಂಕರ ಪಾಟೀಲ್ ಮುನೇನಕೊಪ್ಪ ಹೇಳಿದ್ದಾರೆ.

ಶಿಗ್ಗಾವಿ ಕ್ಷೇತ್ರದ ಉಪಚುನಾವಣೆಗೆ ಕಣಕ್ಕಿಳಿದಿರುವ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರ ಕ್ಷೇತ್ರದಲ್ಲಿ ಪ್ರಚಾರ ಮಾಡಿ ಮುನೇನಕೊಪ್ಪ ಮಾತನಾಡಿದರು.

ಕಾಂಗ್ರೆಸ್ ಪಕ್ಷದ ಈ ಸರ್ಕಾರ ಗ್ಯಾರಂಟಿ ಬಿಟ್ಟರೆ ಬೇರೆ ಏನನ್ನೂ ರಾಜ್ಯದ ಜನತೆಗೆ ಕೊಡುವುದಿಲ್ಲ ಎನ್ನುವಂತಾಗಿದೆ. ಮಳೆ ಹಾನಿ, ಮನೆ ಹಾನಿಯಾಗಿ ಜನರು ಸಂಕಷ್ಟಪಡುತ್ತಿದ್ದರೆ ಈ ಸರ್ಕಾರಕ್ಕೆ ಯಾವುದೇ ಜನಪರ ಕಾಳಜಿ ಇಲ್ಲ ಎಂಬುದು ಸಾಬೀತಾಗಿದೆ. ಆದರೆ ಬಿಜೆಪಿ ಸರ್ಕಾರದಲ್ಲಿ ಹಿಂದೆ ಬಸವರಾಜ



ಬೊಮ್ಮಾಯಿ ಸಿಎಂ ಆಗಿದ್ದ ಕಾಲದಲ್ಲಿ 5 ಲಕ್ಷ ಮನೆ ಮಂಜೂರು ಮಾಡಿದ್ದಾರೆ . ಜಗದೀಶ್ ಶೆಟ್ಟರ್ ರೈತರ ಸಾಲ ಮನ್ನಾ ಮಾಡಿದ್ದಾರೆ.

ಬೊಮ್ಮಾಯಿಯವರು ನಾಲ್ಕು ಬಾರಿ ಶಾಸಕರಾಗಿ ಈ ಕ್ಷೇತ್ರದಲ್ಲಿ ಉದ್ಯೋಗ ನೀಡಲು ಸಾಯಿ ಗಾರ್ಮೆಂಟ್, ಜವಳಿ ಪಾರ್ಕ್ ನೀಡಿದ್ದಾರೆ ಎಂದರು.

ಭರತ್ ಬೊಮ್ಮಾಯಿ ಅಜ್ಜ ಮಾಜಿ ಸಿಎಂ ದೇಶದ ನಾಯಕರು. ಅವರ ತಂದೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಭರತ್ ಬೊಮ್ಮಾಯಿ ಅರಾಮಾಗಿ ಬೇರೆ ಉದ್ಯೋಗ ಮಾಡಿಕೊಂಡು ಹೋಗಬಹುದಿತ್ತು. ಆದರೆ, ಬೊಮ್ಮಾಯಿ ಕುಟುಂಬ ಜನರ ಸೇವೆಗೆ ಮೀಸಲು ಎಂದು ಅವರೂ ಚುನಾವಣೆಗೆ ನಿಂತಿದ್ದಾರೆ. ಅವರನ್ನು ಗೆಲ್ಲಿಸಿ ಕಳುಹಿಸಿ ಕೊಡುವಂತೆ ಶಂಕರ್ ಪಾಟೀಲ್ ಮುನೇನಕೊಪ್ಪ ಮನವಿ ಮಾಡಿದರು.

### ಜನಪದ ವೈಭವ ಉಪನ್ಯಾಸ ಮಾಲಿಕೆಯಲ್ಲಿ ಶಂಕರಣ್ಣ ಸಂಕಣ್ಣವರ ವಿಷಾದ

# ಜನಪದ ಕಲೆ ಮರೆಯಾಗುತ್ತಿದೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ನಮ್ಮ ಪೂರ್ವಜರು ತಮ್ಮ ಕಾಯಕದೊಂದಿಗೆ ಜನಪದ ಹಾಡುಗಳನ್ನು ಹಾಡುತ್ತಿದ್ದರು. ಈ ಜನಪದಲ್ಲಿದ್ದ ಸಂಸ್ಕಾರಯುತ ನೀತಿ ಪಾಠಗಳು ಸಮಾಜವನ್ನು ಜಾಗೃತಿಗೊಳಿಸುತ್ತಿದ್ದವು. ಆದರೆ ಇಂದು ವಿಜ್ಞಾನ ಮತ್ತು ತಂತ್ರಜ್ಞಾನದಿಂದ ಬೆಳವಣಿಗೆಯಿಂದ ಕಾಯಕವಿಲ್ಲದೇ ಜನಪದ ಕಲೆ ಮರೆಯಾಗುತ್ತಿದೆ ಎಂದು ಬೆಂಗಳೂರು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಶಂಕರಣ್ಣ ಸಂಕಣ್ಣವರ ವಿಷಾದಿಸಿದರು.

ಇಲ್ಲಿಯ ನುಲಿ ಚಂದಯ್ಯ ಜಾನಪದ ಕಲಾ ಮೇಳವು ಬಾಲಕಿಯರ ಸರಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಜನಪದ ವೈಭವ ಉಪನ್ಯಾಸ ಮಾಲಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪೂರ್ವಜರು ಬಿತ್ತುವಾಗ, ರಾಶಿ ಮಾಡುವಾಗ, ಬೀಸುವಾಗ, ಕುಟ್ಟುವಾಗ ಹಾಡುತ್ತಾ ಚಟುವಟಿಕೆಯಿಂದ ಕಾಯಕ ನಿರತರಾಗುತ್ತಿದ್ದರು. ಈಗ ರಸ್ತೆಯಲ್ಲಿ ಯಂತ್ರದ ಮೂಲಕ ರಾಶಿ ಮಾಡುವಾಗ ಕಾಯಕವೇ ಇಲ್ಲವಾಗಿದ್ದು, ಜಾನಪದ ಹಾಡುಗಳು ಮರೆಯಾಗುತ್ತಿವೆ. ಈ ಸಾಹಿತ್ಯದಲ್ಲಿ ಮಕ್ಕಳಿಂದ ವೃದ್ಧರವರೆಗೂ ನೀತಿ ಪಾಠಗಳಿವೆ ಎಂದರು.

> ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಕಲಾವಿದ ಬಸವರಾಜ ಹಡಗಲಿ ಮಾತನಾಡಿ, ಸಂತ ಶರಣರು ತಮ್ಮ ಸಂತೋಷಕ್ಕಾಗಿ ವಚನ, ತತ್ವ ಪದಗಳನ್ನು ರಚಿಸಿ ಹಾಡಿಲ್ಲ. ಈ ಸಮಾಜದ ಅಂಕು–ಡೊಂಕು ತಿದ್ದಲು ಹಾಡಿನ ಮೂಲಕ ಜಾಗೃತಿ ಮೂಡಿಸಿದ್ದಾರೆ. ಕೇವಲ ತಾತ್ಕಾಲಿಕ ಖುಷಿ ಕೊಡುವ ಈಗಿನ ನವ್ಯ ಗೀತೆಗಳಿಗೆ ಮಾರು ಹೋಗದೇ ನಮ್ಮ ಸಂಸ್ಕೃತಿಯನ್ನು ಬೆಳಗಿಸುವ ಗೀಗೀ ಪದ, ತತ್ವ ಪದ, ಜಾನಪದ ಪದ, ಶೋಬಾನ ಪದ, ಹಂತಿ ಪದಗಳನ್ನು ಕಲಿತು ಉಳಿಸಬೇಕಾಗಿದ್ದು, ಶಾಲಾ ಶಿಕ್ಷಣದಲ್ಲಿ ಜಾನಪದ ಪಠ್ಯವನ್ನು ಸೇರ್ಪಡೆಗೊಳಿಸಿದ್ದು ಸಂತಸ ತಂದಿದೆ ಎಂದರು.

▶▶ 4ನೇ ಪುಟಕ್ಕೆ

### ಚಹಾಪುಡಿಗೆ ಅಕ್ರಮವಾಗಿ ಬಣ್ಣ | ಪೊಲೀಸರು, ಆಹಾರ ಇಲಾಖೆ ಅಧಿಕಾರಿಗಳಿಂದ ದಾಳಿ

# 10 ಟನ್ ಕಲಬೆರಕೆ ಚಹಾಪುಡಿ ವಶಕ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದುಗಿನ ಲೊಬೋಸಾ ಫುಡ್ ಆಂಡ್ ಬೆವರೇಜ್ ವ್ಯವಸ್ಥಾಪಕ ಸಂದೀಪ ಕಬಾಡಿ ಇವರು ನೀಡಿರುವ ದೂರಿನ ಹಿನ್ನೆಲೆಯಲ್ಲಿ ಚಹಾ ಪುಡಿಗೆ ಅಕ್ರಮವಾಗಿ ಬಣ್ಣ ಸೇರಿಸಿ ಮಾರಾಟ ಮಾಡುತ್ತಿರುವುದು ಬೆಳಕಿಗೆ ಬಂದಿದೆ. ಅಕ್ರಮ ಚಹಾ ಪುಡಿ ದಂಧೆಕೋರರ ಗೋದಾಮಿಗೆ ಪೊಲೀಸರು ಮತ್ತು ಆಹಾರ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ಅಕ್ರಮವಾಗಿ ಸಂಗ್ರಹಸಿದ್ದ ಅಂದಾಜು 15 ಲಕ್ಷ ರೂಪಾಯಿ ಮೌಲ್ಯದ 10 ಟನ್ ಕಲಬೆರಕೆ ಚಹಾ ಪುಡಿ ಮತ್ತು ತಯಾರಕನನ್ನು ವಶಕ್ಕೆ ಪಡೆದುಕೊಂಡಿರುವ ಘಟನೆ ಶನಿವಾರ ನಡೆದಿದೆ.




**ಪ್ರಕರಣದ ವಿವರ:** ಪಟ್ಟಣದ ದಯಾನಂದ ಟ್ರೇಡರ್ಸ್ ಹೆಸರಿನಲ್ಲಿ ಕಳೆದ ಅನೇಕ ವರ್ಷಗಳಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಕಲಬೆರಕೆ ಟೀ ಪುಡಿ ಮಾರಾಟ ದಂಧೆ ನಡೆಯುತ್ತಿದೆ. 12ರಿಂದ 15 ಕೆಜಿ ಚಹಾ ಪುಡಿಗೆ ಅರ್ಧ ಕೆಜಿ ಸಿಂಥೆಟಿಕ್ ಕಲರ್ ಬಳಸುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಲಕ್ಷ್ಮೇಶ್ವರದ ದಯಾನಂದ ಟ್ರೇಡರ್ಸ್‌ನ ಮಲ್ಲಿಕಾರ್ಜುನ ಕಡಕೋಳ ಎನ್ನುವ ವ್ಯಕ್ತಿ ಅನಧಿಕೃತವಾಗಿ ಚಹಾ ಪುಡಿಗೆ ಬಣ್ಣ ಬೆರೆಸಿ ಮಾರಾಟ ಮಾಡುತ್ತಿರುವ ಹಿನ್ನೆಲೆಯಲ್ಲಿ ಲೋಬೋಸಾ ಕಂಪನಿಯ ಉತ್ಪಾದನೆಯ ನಕಲು ಮಾಡಿ ಮೋಸ, ವಂಚನೆ ಮಾಡಿ ಕಂಪನಿಯ ಹೆಸರನ್ನು ಹಾಳು ಮಾಡುತ್ತಿದ್ದಾರೆ ಹಾಗೂ ವ್ಯಾಪಾರದಲ್ಲಿ ನಷ್ಟ ಮಾಡಿದ್ದಾರೆ ಎಂದು ಆರೋಪಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ದೂರು ದಾಖಲಿಸಿದ್ದಾರೆ.

ಲೋಬೋಸಾ ಕಂಪನಿಯ ವ್ಯವಸ್ಥಾಪಕ ಸಂದೀಪ ಕಬಾಡಿ ಮತ್ತು ಕಂಪನಿಯ ಮುಖ್ಯಸ್ಥ ಲೋಬಾಸಾ ಕಬಾಡಿ ಮಾಹಿತಿ ನೀಡಿ, ಲೊಬೋಸಾ ಚಹಾ ಪುಡಿಯಲ್ಲಿ ಸಕ್ಕರೆ, ಏಲಕ್ಕಿ, ಶುಂಠಿ, ಫುಡ್ ಕಲರ್ ಮಿಕ್ಸ್ ಮಾಡುವ ಪರವಾನಿಗೆ, ಪೇಟೆಂಟ್ ನಮ್ಮ ಕಂಪನಿ ಮಾತ್ರ ಪಡೆದುಕೊಂಡಿದೆ. ಬೇರಾರೂ ನಮ್ಮ ಉತ್ಪನ್ನಗಳ ನಕಲು ಮಾಡದಂತೆ ಎಫ್‌ಎಸ್‌ಎಸ್‌ಎಐ ದೆಹಲಿಯಿಂದ ಅಧಿಕೃತ ಅನುಮತಿ ಪಡೆಯಲಾಗಿದೆ. ಚಹಾ ಪುಡಿಯಲ್ಲಿ ಯಾರಾದರೂ ಬಣ್ಣ ಮಿಶ್ರಣ ಮಾಡಿದರೆ ಅವರ ಮೇಲೆ ಕಾಪಿರೈಟ್ ಉಲ್ಲಂಘನೆ ದೂರು ನೀಡುವದಾಗಿ ಹೇಳಿದರಲ್ಲದೆ, ಜಿಲ್ಲೆಯಲ್ಲಿ ಅನೇಕ ಕಡೆಗಳಲ್ಲಿ ಅಕ್ರಮವಾಗಿ ಚಹಾ ಪುಡಿಯಲ್ಲಿ ಮಿಶ್ರಣ ಮಾಡುವದು ನಡೆದಿದ್ದು, ಅಧಿಕಾರಿಗಳು ಈ ಕುರಿತಂತೆ ಪರಿಶೀಲನೆ ಮಾಡಿ ಕ್ರಮ ತೆಗೆದುಕೊಳ್ಳಬೇಕು ಎಂದರು.

> ದೂರಿನ ಹಿನ್ನೆಲೆಯಲ್ಲಿ ಪಟ್ಟಣದ ಶಿಗ್ಲಿ ರಸ್ತೆಯ ಗೋಡೌನ್‌ಗೆ ಕ್ರೈಂ ವಿಭಾಗ ಪಿಎಸ್‌ಐ ಟಿ.ಕೆ. ರಾಠೋಡ ಹಾಗೂ ಆಹಾರ ಸುರಕ್ಷತಾ ಮತ್ತು ಗುಣಮಟ್ಟದ ಅಧಿಕಾರಿ ರಾಜೇಂದ್ರ ಗಡಾದ ಜಂಟಿ ಕಾರ್ಯಾಚರಣೆಯಲ್ಲಿ ದಾಳಿ ಮಾಡಿದಾಗ ಅಕ್ರಮವಾಗಿ ಸಂಗ್ರಹಿಸಿದ್ದ ಸುಮಾರು 300 ಚಹಾ ಪುಡಿ ಪ್ಯಾಕೇಟ್‌ಗಳು, ಅಂದಾಜು 15 ಲಕ್ಷ ರೂಪಾಯಿ ಮೌಲ್ಯದ ಸುಮಾರು 10 ಟನ್ ಚಹಾ ಪುಡಿ ವಶಪಡಿಸಿಕೊಂಡಿದ್ದಾರೆ.



## ಸಂಪಾದಕೀಯ

# ವಕ್ಫ್ ಹೆಸರಿನಲ್ಲಿ ನಾಟಕ

ವಕ್ಫ್ ವಿವಾದ ದಿನದಿಂದ ದಿನಕ್ಕೆ ಮತ್ತಷ್ಟು ಬೆಳೆಯುತ್ತಲೇ ಇದೆ. ಪ್ರತಿನಿತ್ಯ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸಾರ್ವಜನಿಕರ ಆಸ್ತಿಯಲ್ಲಿ ವಕ್ಫ್ ನಮೂದಾಗಿರುವುದು ಬಹಿರಂಗಗೊಳ್ಳುತ್ತಲೇ ಇದೆ. ರೈತರ, ಜನಸಾಮಾನ್ಯರ ಹಾಗೂ ಐತಿಹಾಸಿಕ ತಾಣಗಳ ಆಸ್ತಿಯಲ್ಲಿ ವಕ್ಫ್ ಎಂದು ದಾಖಲಾಗುತ್ತಿರುವುದು ಬೆಳಕಿಗೆ ಬರುತ್ತಲೇ ಇದೆ.

ಇದರ ಲಾಭ ಪಡೆಯುತ್ತಿರುವ ಪ್ರತಿಪಕ್ಷ ಬಿಜೆಪಿ, ಹೀಗೆ ನಮ್ಮದಾಗಿರುವ ದಾಖಲೆಗಳನ್ನು ಹಿಡಿದು ಮಾಧ್ಯಮಗಳ ಮುಂದೆ ತಮ್ಮ ರೋಷಾವೇಶವನ್ನ ಪ್ರದರ್ಶಿಸುವುದೇ ಕಾಯಕವನ್ನಾಗಿ ಮಾಡಿಕೊಂಡಿದ್ದಾರೆ. ಅದರಲ್ಲೂ ರಾಜ್ಯದ ಮೂರೂ ಕ್ಷೇತ್ರಗಳಲ್ಲಿ ಉಪಚುನಾವಣೆ ನಡೆಯುತ್ತಿರುವುದರಿಂದ, ಸದ್ಯಕ್ಕೆ ಬಿಜೆಪಿ ನಾಯಕರಿಗೆ ಭಾವನಾತ್ಮಕ ವಿಷಯವೊಂದು ಸಿಕ್ಕಂತಾಗಿದೆ.

ಅದರಲ್ಲೂ ಆಡಳಿತ ಪಕ್ಷದ ಸಚಿವ

ಜಮೀರ್ ಅಹ್ಮದ್ ಸೃಷ್ಟಿಸಿದ ವಿವಾದ ಪ್ರತಿಪಕ್ಷಗಳಿಗೆ ಆಹಾರವಾಗಿ ಪರಿಣಮಿಸಿದೆ. ವಕ್ಫ್ ವಿವಾದ ಮತದಾರರ ಮೇಲೂ ಪರಿಣಾಮ ಬೀರುವ ಅಂಶವಾಗಿರುವುದರಿಂದ ಬಿಜೆಪಿಯ ಪ್ರತಿಯೊಬ್ಬ ನಾಯಕರು ಇವತ್ತು ವಕ್ಫ್ ಆಸ್ತಿ ವಿಷಯವನ್ನೇ ಮುಂದಿಟ್ಟುಕೊಂಡು ಮತಯಾಚನೆ ತಂತ್ರಕ್ಕೆ ಮೊರೆ ಹೋಗಿದ್ದಾರೆ.

ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶ ಏನೆಂದರೆ, ಇವರಿಗೆ ವಕ್ಫ್ ಎಂದು ನಮೂದಾದ ಆಸ್ತಿಗಳು ಜನಸಾಮಾನ್ಯರಿಗೆ ಸೇರಿದ್ದು, ಐತಿಹಾಸಿಕ ತಾಣಗಳು, ಮಠ ಮಂದಿರಗಳಿಗೆ ಸೇರಿರುವ ಆಸ್ತಿಗಳಾಗಿವೆ. ಯಾವ ರಾಜಕಾರಣಿಯ ಆಸ್ತಿಯು ವಕ್ಫ್ ಬೋರ್ಡ್ ಗೆ ಸೇರಿರುವ ಬಗ್ಗೆ ಉಲ್ಲೇಖಗಳಿಲ್ಲ. ಸೇರಿದ್ದರು ಅದನ್ನು ಯಾರೊಬ್ಬರೂ ಹೇಳಿಕೊಳ್ಳುತ್ತಿಲ್ಲ. ಕಾರಣಗಳು ಅನೇಕ ಇವೆ.

ಕಾಂಗ್ರೆಸ್ ಮಾತ್ರವಲ್ಲ ಬಿಜೆಪಿ ನಾಯಕರ ಆಸ್ತಿಯಲ್ಲಿಯೂ ವಕ್ಫ್ ಎಂದು ನಂಬುದಾಗಿರುವ ಒಂದೇ ಒಂದು ಉದಾಹರಣೆ ಸಿಗುವುದಿಲ್ಲ. ಕಾಂಗ್ರೆಸ್ ನಾಯಕರ ಆಸ್ತಿಗಳಲ್ಲಿಯೂ ಆ ರೀತಿ ಆಗಿಲ್ಲ. ಕಾರಣಗಳ ಬಗ್ಗೆ ವಿಮರ್ಶೆ ಮಾಡುವುದಕ್ಕಿಂತ, ಜನಸಾಮಾನ್ಯರು ಈ ಬಗ್ಗೆ ಅರ್ಥೈಸಿಕೊಳ್ಳಬೇಕು ಮತ್ತು ಚಿಂತನೆ ನಡೆಸಬೇಕು. ಅಂದಾಗ ಮಾತ್ರ ವಕ್ಫ್ ಹಿಂದಿನ ಅಸಲಿಯತ್ತು ಹೊರಬರುತ್ತದೆ.

## ಟ್ರಂಪ್ ಗೆಲುವಿನ ಬೆನ್ನಲ್ಲೇ ಬೈಡೆನ್ ಪೌರತ್ವ ನೀತಿ ರದ್ದು : ವಲಸಿಗರಿಗೆ ಆತಂಕ

■ವಿಜಯಸಾಕ್ಷಿ ಸುದ್ದಿ, ಅಮೆರಿಕ



ಅಮೆರಿಕದ ಪ್ರಜೆಗಳನ್ನು ಮದುವೆಯಾಗಿರುವ ವಲಸಿಗರಿಗೆ ಪೌರತ್ವ ನೀಡುವ ಪ್ರಕ್ರಿಯೆಯನ್ನು ಸರಳಗೊಳಿಸಲು ಜೋ ಬೈಡೆನ್ ಆಡಳಿತ ಜಾರಿಗೊಳಿಸಿದ್ದ ನೀತಿಯೊಂದನ್ನು ಯುಎಸ್ ಫೆಡರಲ್ ನ್ಯಾಯಾಧೀಶರು ಗುರುವಾರ (ನ.8) ರದ್ದುಗೊಳಿಸಿದ್ದಾರೆ.

ಯುಎಸ್‌ನ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಡೊನಾಲ್ಡ್ ಟ್ರಂಪ್ ಅಧಿಕಾರ ಸ್ವೀಕರಿಸುವ ಮುನ್ನವೇ, ನ್ಯಾಯಾಲಯ ಮಹತ್ವದ ಆದೇಶ ನೀಡಿದೆ. ಇದು ಟ್ರಂಪ್ ಆಡಳಿತದ ಪ್ರಥಮ ಹೆಜ್ಜೆ ಎಂದೇ ಪರಿಗಣಿಸಲಾಗಿದೆ. ಟ್ರಂಪ್ ಕೂಡ ಈ ನಿಟ್ಟಿನಲ್ಲಿ ನಿರ್ಧಾರ ಕೈಗೊಳ್ಳುವ ಒಲವು ಹೊಂದಿದ್ದರು ಎಂದು ವರದಿಗಳು ಹೇಳಿವೆ.

ಅಮೆರಿಕದ ಪ್ರಜೆಗಳನ್ನು ಮದುವೆಯಾಗಿರುವ ವಲಸಿಗರು ತಮ್ಮ ಬಳಿಕ ಸೂಕ್ತ ದಾಖಲೆಗಳು ಇಲ್ಲದಿದ್ದರೂ ದೇಶವನ್ನು ತೊರೆಯದೆ 'ಗ್ರೀನ್ ಕಾರ್ಡ್'ಗೆ ಅರ್ಜಿ ಸಲ್ಲಿಸಲು ಬೈಡೆನ್ ಆಡಳಿತದ ನೀತಿ ಅವಕಾಶ ಮಾಡಿಕೊಟ್ಟಿತ್ತು. ವಲಸಿಗ ಕುಟುಂಬಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಯುಎಸ್ ಅಧ್ಯಕ್ಷರು ಜಾರಿಗೊಳಿಸಿದ ಅತಿದೊಡ್ಡ ನೀತಿ ಇದು ಎಂದು ಬಣ್ಣಿಸಲಾಗಿತ್ತು. ಈ ನೀತಿಯಿಂದ ಭಾರತೀಯರು ಸೇರಿದಂತೆ ಗಡಿಪಾರು ಆತಂಕ ಎದುರಿಸುತ್ತಿರುವ ಸುಮಾರು 5 ಲಕ್ಷ ವಲಸಿಗರು ನಿರಾಳರಾಗಿದ್ದರು. ಆದರೆ, ಈ ನೀತಿಗೆ ಆಕ್ಷೇಪ ವ್ಯಕ್ತಪಡಿಸಿದ ಅನೇಕ ಅರ್ಜಿಗಳು ಸಲ್ಲಿಕೆಯಾಗಿತ್ತು. ಅರ್ಜಿ ವಿಚಾರಣೆ ನಡೆಸಿದ್ದ ಫೆಡರಲ್ ನ್ಯಾಯಾಧೀಶ. ಕೆ. ಕ್ಯಾಂಪ್‌ಬೆಲ್ ಬಾರ್ಕರ್ ಅವರು ಕಳೆದ ಆಗಸ್ಟ್ ತಿಂಗಳಲ್ಲಿ ತಡೆ ನೀಡಿತ್ತು.

ಗುರುವಾರ ನೀತಿಯನ್ನು ರದ್ದುಗೊಳಿಸಿ ನ್ಯಾಯಾಧೀಶರು ಅಂತಿಮ ತೀರ್ಪು ಪ್ರಕಟಿಸಿದ್ದಾರೆ. ಈ ವಲಸೆ ನೀತಿ ಅನುಷ್ಠಾನಗೊಳಿಸುವ ಮೂಲಕ ಬೈಡೆನ್ ಆಡಳಿತ ತನ್ನ ಅಧಿಕಾರ ನೀತಿಯನ್ನು ಮೀರಿದೆ ಎಂದು ನ್ಯಾಯಾಲಯ ತೀರ್ಪಿನಲ್ಲಿ ಹೇಳಿದೆ.

ನ್ಯಾಯಾಲಯದ ಆದೇಶದಿಂದ ಇದೀಗ ಲಕ್ಷಾಂತರ ವಲಸಿಗ ಜನರಲ್ಲಿ ಆತಂಕ ಶುರುವಾಗಿದೆ. ಡೆಮಾಕ್ರಟಿಕ್ ಪಕ್ಷದ ಜೋ ಬೈಡೆನ್ ಆಡಳಿತ ಜಾರಿಗೊಳಿಸಿದ್ದ ವಲಸೆ ನೀತಿಗೆ ಟ್ರಂಪ್ ಪ್ರತಿನಿಧಿಸುವ ರಿಪಬ್ಲಿಕ್ ಪಕ್ಷ ವಿರೋಧ ವ್ಯಕ್ತಪಡಿಸಿತ್ತು. ಬೈಡೆನ್ ನೀತಿ ದೇಶದ ಆರ್ಥಿಕ ಹೊರೆಯನ್ನು ಹೆಚ್ಚಿಸುವುದಲ್ಲದೆ, ಇನ್ನಷ್ಟು ವಲಸಿಗರು ದೇಶಕ್ಕೆ ಬರಲು ಅನುವು ಮಾಡಿಕೊಡುತ್ತದೆ ಎಂದಿತ್ತು.

## ಯಡಿಯೂರಪ್ಪ, ಶ್ರೀರಾಮುಲು ವಿರುದ್ಧ ಕಾನೂನು ಕ್ರಮಕ್ಕೆ ಶಿಫಾರಸು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದ್ದ ಕೋವಿಡ್ ಹಗರಣಕ್ಕೆ ಸಂಬಂಧಪಟ್ಟಂತೆ ಪಿಪಿಇ ಕಿಟ್ ಹಾಗೂ ಇತರೆ ಸಾಮಾಗ್ರಿಗಳ ಖರೀದಿಯಲ್ಲಿ ಅಕ್ರಮ ನಡೆದಿರುವುದು ದೃಢಪಟ್ಟಿದೆ ಎಂದು ನ್ಯಾಯಮೂರ್ತಿ ಜಾನ್ ಮೈಕೆಲ್ ಡಿ'ಕುನ್ಹಾ ಆಯೋಗ ಹೇಳಿದ್ದು, ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಮತ್ತು ಮಾಜಿ ಆರೋಗ್ಯ ಸಚಿವ ಬಿ.ಶ್ರೀರಾಮುಲು ವಿರುದ್ಧ ಕಾನೂನು ಕ್ರಮಕ್ಕೆ ಶಿಫಾರಸು ಮಾಡಿದೆ ಎಂದು ವರದಿಯಾಗಿದೆ.

2020ರಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋವಿಡ್ ಸೋಂಕು ನಿಭಾಯಿಸುವಲ್ಲಿ 7 ಸಾವಿರ ಕೋಟಿ ರೂಪಾಯಿಗೂ ಅಧಿಕ ಅಕ್ರಮ ನಡೆದಿದೆ ಎಂದು ನ್ಯಾಯಮೂರ್ತಿ ಜಾನ್ ಮೈಕೆಲ್ ಡಿ'ಕುನ್ಹಾ ಆಯೋಗ 2024ರ ಆಗಸ್ಟ್ 31ರಂದು ಸಿಎಂ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ ತಿಳಿಸಿತ್ತು.

ಚೀನಾದ ಸಂಸ್ಥೆಗಳಿಂದ 3 ಲಕ್ಷ ಪಿಪಿಇ ಕಿಟ್‌ಗಳನ್ನು ನೇರವಾಗಿ ಖರೀದಿಸುವ ಕುರಿತು ಆಗಿನ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಆದೇಶಿಸಿದ್ದರು. ಎರಡು ಚೀನಾ ಸಂಸ್ಥೆಗಳಿಂದ ಪಿಪಿಇ ಕಿಟ್‌ಗಳನ್ನು ದುಬಾರಿ ದರದಲ್ಲಿ ಕೊಂಡುಕೊಳ್ಳಲಾಗಿದೆ ಎಂಬುವುದು ಬಯಲಾಗಿದೆ. ಆದ್ದರಿಂದ ಯಡಿಯೂರಪ್ಪ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾಗಿದ್ದ ಶ್ರೀರಾಮುಲು ವಿರುದ್ಧ ಕಾನೂನು ಜರುಗಿಸಲು ಜಾನ್ ಮೈಕೆಲ್ ಡಿ'ಕುನ್ಹಾ ಆಯೋಗ ಶಿಫಾರಸು ಮಾಡಿದೆ ಎಂದು ಈದಿನ.ಕಾಂ ವರದಿ ಮಾಡಿದೆ.

### ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್‌ನಿಂದ ರಕ್ತದಾನ ಶಿಬಿರ

# ಎಲ್ಲ ದಾನಗಳಲ್ಲಿ ರಕ್ತದಾನ ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲ ದಾನಗಳಲ್ಲಿ ರಕ್ತದಾನ ಶ್ರೇಷ್ಠವಾಗಿದೆ. ಒಬ್ಬ ವ್ಯಕ್ತಿಯ ಜೀವನ್ಮರಣದ ವಿಷಯದಲ್ಲಿ ರಕ್ತ ಅತ್ಯಂತ ಪ್ರಮುಖ ಪಾತ್ರ ವಹಿಸುವದು ಎಂದು ಗದಗ ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್ ಅಧ್ಯಕ್ಷ ಅಪ್ಪುರಾಜ ಭದ್ರಕಾಳಮ್ಮನಮಠ ಅಭಿಪ್ರಾಯಪಟ್ಟರು.

ಅವರು ನಗರದ ನಾಲ್ವಾಡಗಲ್ಲಿಯ ಅಂಗನವಾಡಿ ಕೇಂದ್ರದಲ್ಲಿ ಗದಗ ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್, ಅಪ್ಪುರಾಜ ಇವೆಂಟ್ಸ್ ಹಾಗೂ ಗದುಗಿನ ಬಸವೇಶ್ವರ ರಕ್ತ ಕೇಂದ್ರದ ಆಶ್ರಯದಲ್ಲಿ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಏರ್ಪಡಿಸಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ನವೆಂಬರ್ 20ರಂದು ಗದುಗಿನಲ್ಲಿ ಪ್ರತಿ ವರ್ಷದಂತೆ ಕರ್ನಾಟಕ ರಾಜ್ಯೋತ್ಸವದ ಸಂಭ್ರಮಾಚರಣೆ, ಸಾಂಸ್ಕೃತಿಕ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭವನ್ನು ವೈವಿಧ್ಯಮಯವಾಗಿ ಆಚರಿಸಲಿದ್ದು, ಸರ್ವರ ಸಹಕಾರವಿರಲಿ. ಹಿರಿಯರಾದ ವೀರಪ್ಪ ಲಕ್ಕುಂಡಿ, ವ್ಹಿ.ಕೆ. ಮಟ್ಟಿ, ಶಿವಯ್ಯ ಭದ್ರಕಾಳಮ್ಮನಮಠ ಅವರು ಸಂಘಟನೆಯು ಸಮಾಜಮುಖಿಯಾಗಿ ಕಾರ್ಯ ಮಾಡುತ್ತಿರುವದು ಅಭಿನಂದನೀಯ ಎಂದು ಅಪ್ಪುರಾಜ ಭದ್ರಕಾಳಮ್ಮನಮಠ ನುಡಿದರು.



ರಕ್ತಕ್ಕೆ ಪರ್ಯಾಯ ಎಂಬುದು ಇಲ್ಲ. ಮಾನವನ ದೇಹದಲ್ಲೇ ಉತ್ಪಾದನೆಯಾಗುವ ರಕ್ತ ಪರಿಶುದ್ಧವಾಗಿರಲು ರಕ್ತದಾನ ಮಾಡುವ ಪ್ರಕ್ರಿಯೆ ವರ್ಷದಲ್ಲಿ ಕನಿಷ್ಠ ಎರಡು ಸಲವಾದರೂ ಆಗಬೇಕು. ಅಂದಾಗ ಹೊಸ ರಕ್ತ ಉತ್ಪಾದನೆಯಾಗಿ ಮನುಷ್ಯ ಚೈತನ್ಯದಿಂದ ಉತ್ಸಾಹದೊಂದಿಗೆ ಕ್ರಿಯಾಶೀಲತೆಯಿಂದ ಕಾರ್ಯ ಮಾಡಲು ಸಾಧ್ಯ. ಆದ್ದರಿಂದ ಎಲ್ಲರೂ ಜನ್ಮದಿನ, ಮದುವೆ ವಾರ್ಷಿಕೋತ್ಸವ, ಹೊಸ ವರ್ಷ ಹೀಗೆ ವಿಶೇಷ ಸಂದರ್ಭಗಳನ್ನು ನೆಪವಾಗಿಸಿಕೊಂಡು ರಕ್ತದಾನ ಮಾಡಬೇಕೆಂದರು.

ರಕ್ತದಾನದಿಂದ ಹೊಸರಕ್ತ ಉತ್ಪಾದನೆಗೆ ಅವಕಾಶ ಒಂದೆಡೆಯಾದರೆ ಇನ್ನೊಂದರೆ ತೀವ್ರ ಸಂಕಷ್ಟದಲ್ಲಿರುವ ಜೀವನ್ಮರಣಗಳ ನಡುವೆ ತೊಳಲಾಟದಲ್ಲಿರುವ ವ್ಯಕ್ತಿಯ ಜೀವ ರಕ್ಷಣೆಗೆ ಈ ರಕ್ತ ಉಪಯೋಗವಾಗಬಲ್ಲದು. ಅಂತಹ ಪುಣ್ಯಪ್ರಾಪ್ತಿಯ ಸಂತೃಪ್ತ ಭಾವನೆ ಮೂಡುವ ಸಂತಸದ ಘಳಿಗೆಗೆ ನಾವೆಲ್ಲರೂ ಅಣಿಗೊಳ್ಳಬೇಕಿದೆ. ಈ ನಿಟ್ಟಿನಲ್ಲಿ ನಮ್ಮ ಸಂಘಟನೆ ಪ್ರತಿವರ್ಷ ರಕ್ತದಾನ ಶಿಬಿರ ನಡೆಸಿಕೊಂಡು ಬಂದಿದೆ ಎಂದರು.

ಪ್ರಾರಂಭದಲ್ಲಿ ಶಿವಯೋಗಿ ಟೆಂಗಿನಕಾಯಿ ಪ್ರಾರ್ಥಿಸಿದರು. ಬಸವರಾಜ ಜಿನಗಾ ಸ್ವಾಗತಿಸಿದರು. ಹರೀಶ್ ಕಮ್ಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಕಾಶ ಬೇಂದ್ರೆ ನಿರೂಪಿಸಿದರು. ಕೊನೆಗೆ ರಾಜು ಹುಳ್ಳಿಗೌಡ್ರ ವಂದಿಸಿದರು.

ಶಿಬಿರದಲ್ಲಿ ಸುಮಾರು 25ಕ್ಕೂ ಹೆಚ್ಚು ಜನರು ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ಸಿದ್ದು ಚನ್ನವೀರಶೆಟ್ಟರ, ಪ್ರಶಾಂತ ಪಾಟೀಲ, ನಾಶೀರ್ ಚಿಕೇನಕೊಪ್ಪ, ಇರ್ಫಾನ್ ಡಂಬಳ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

## ನಿಡಗುಂದಿ ಪ್ರೌಢಶಾಲೆಗೆ ಕಂಪ್ಯೂಟರ್ ಕೊಡುಗೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಮ್ಮ ಬಾಳಿಗೆ ವಿದ್ಯೆಯ ಮೂಲಕ ಬೆಳಕು ನೀಡಿದ ಶಾಲೆಯ ಋಣವನ್ನು ಎಂದಿಗೂ ಮರೆಯಲಾಗದು. ಅದನ್ನು ನೆನಪಿಸಿಕೊಂಡೇ ನೀವು ಕಲಿತ ಶಾಲೆಗೆ ನಾಲ್ಕು ಕಂಪ್ಯೂಟರ್‌ಗಳನ್ನು ನೀಡಿದ್ದು ಶ್ಲಾಘನೀಯ ಎಂದು ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮಿಗಳು ಹೇಳಿದರು.

ಸಮೀಪದ ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಗೆ ಹಿಂದಿನ ವಿದ್ಯಾರ್ಥಿಗಳು ಕಾಣಿಕೆಯಾಗಿ ನೀಡಿದ ನಾಲ್ಕು ಕಂಪ್ಯೂಟರ್‌ಗಳನ್ನು ಹಾಲಕೆರೆಯ ಶ್ರೀಮಠದಲ್ಲಿ ಸ್ವೀಕರಿಸಿ ಅವರು ಆಶೀರ್ವಚನ ನೀಡಿದರು.

ತಂತ್ರಜ್ಞಾನದ ಬಳಕೆಯ ಪ್ರಾಮುಖ್ಯತೆಯನ್ನು ಅರಿತುಕೊಂಡು ನಮ್ಮ ಸಂಸ್ಥೆಯ 6 ಹಳೆಯ




ವಿದ್ಯಾರ್ಥಿಗಳು ಶಾಲೆಗೆ ನಾಲ್ಕು ಕಂಪ್ಯೂಟರ್ ನೀಡಿದ್ದು, ನಾವು ಅವರನ್ನು ಅಭಿನಂದಿಸುತ್ತೇವೆ. ಇವರು ಕೊಟ್ಟಿರುವ ಕಂಪ್ಯೂಟರ್‌ಗಳಿಂದ ವಿದ್ಯಾರ್ಥಿಗಳು ತಂತ್ರಜ್ಞಾನದ ಬಗ್ಗೆ ಹೆಚ್ಚು ತಿಳಿದುಕೊಂಡು ಅದನ್ನು ಸರಿಯಾದ ರೀತಿಯಲ್ಲಿ ಬಳಕೆಯನ್ನು ಮಾಡಬೇಕು. ವಿದ್ಯಾರ್ಥಿಗಳು ಅದರ ಉಪಯೋಗವನ್ನು ತೆಗೆದುಕೊಂಡು ಸಾಧನೆಯನ್ನು ಮಾಡಿದಾಗ ಮಾತ್ರ ನಮ್ಮ ಸಂಸ್ಥೆಗೆ ಮತ್ತು ಕೊಡುಗೆ ನೀಡಿದ ಹಳೆಯ ವಿದ್ಯಾರ್ಥಿಗಳಿಗೆ ಕೃತಜ್ಞತೆ ಅರ್ಪಿಸಿದಂತಾಗುತ್ತದೆ ಎಂದು ಶ್ರೀಗಳು ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಅನ್ನದಾನೇಶ್ವರ ಪ್ರೌಢಶಾಲೆಯ ಅಧ್ಯಕ್ಷ ಜಗದೀಶ ಕರಡಿ, ಹನಮಂತಪ್ಪ ಸಾಹುಕಾರ ಕೊಪ್ಪದ, ಎಂ.ಜಿ. ಸೋಮನಕಟ್ಟಿ, ಕೊಡುಗೆ ನೀಡಿದ ಹಳೆಯ ವಿದ್ಯಾರ್ಥಿಗಳಾದ ರೈಮಾನಸಾಬ ನದಾಫ್, ಮಹೇಶ ಕರಡಿ, ವೀರಣ್ಣ ಹಳ್ಳಿ, ವಿಶ್ವನಾಥ ಗುಳಬಾಳ, ವೀರಣ್ಣ ಗೆದಗೇರಿ, ಅರ್ಜುನ್ ಸಿಂಗ್ ರಜಪೂತ, ಮುಖ್ಯೋಪಾಧ್ಯಾಯ ಕೆ.ಪಿ. ರಾಠೋಡ, ಶಿಕ್ಷಕರಾದ ಎಚ್.ಬಿ. ಕಟ್ಟಿಮನಿ, ಎಸ್.ವಿ. ಹಳ್ಳಿಕೇರಿ, ಎಸ್.ಐ. ದಿಂಡೂರ, ಎಂ.ಬಿ. ಕೊಪ್ಪದ, ವೆಂಕನಗೌಡ ಎ, ಕೆ.ವಿ. ಗಡಾದ, ಎಸ್.ಬಿ. ಹಿರೇಮಠ, ಬಿ.ಪಿ. ಕಾಗಿ, ಈರಣ್ಣ ಅರಮನಿ ಇನ್ನಿತರರು ಇದ್ದರು.

## ಜಾತಿ ತಾರತಮ್ಯ; 20 ರಂದು ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಬೆಂಗಳೂರು (ಐಐಎಂ–ಬಿ) ನಲ್ಲಿ ನಡೆಯುತ್ತಿರುವ ವ್ಯವಸ್ಥಿತ ತಾರತಮ್ಯ ಮತ್ತು ಸಾಂವಿಧಾನಿಕ ಹಕ್ಕುಗಳ ಉಲ್ಲಂಘನೆಯ ವಿರುದ್ಧ ಅಖಿಲ ಭಾರತ ಒಬಿಸಿ ವಿದ್ಯಾರ್ಥಿಗಳ ಸಂಘ (AIOBCSA) ಮತ್ತು ಡಾ. ಬಿಆರ್ ಅಂಬೇಡ್ಕರ್ ರಾಷ್ಟ್ರೀಯ ಇಂಜಿನಿಯರ್‌ಗಳ ಸಂಘ (BANAE) ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನವೆಂಬರ್ 20ರಂದು ಪ್ರತಿಭಟನೆ ಹಮ್ಮಿಕೊಂಡಿದೆ.

ಐಐಟಿ, ಐಐಎಂ ಸೇರಿದಂತೆ ಭಾರತದ ಉನ್ನತ ವಿದ್ಯಾಸಂಸ್ಥೆಗಳಲ್ಲಿ ವೈವಿದ್ಯತೆ ಮತ್ತು ಒಳಗೊಳ್ಳುವಿಕೆ ಕುರಿತು ಆರ್‌ಟಿಐ ಮೂಲಕ ಮಾಹಿತಿ ಪಡೆಯಲಾಗಿದೆ. ಆ ಮಾಹಿತಿಯ ಪ್ರಕಾರ, ಮೀಸಲಾತಿ, ರೋಸ್ಟರ್ ನಿಯಮಗಳನ್ನು ಪಾಲನೆ ಮಾಡಲಾಗುತ್ತಿಲ್ಲ. ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಜಾತಿ–ಆಧಾರಿತ ತಾರತಮ್ಯವನ್ನು ಅನುಭವಿಸುತ್ತಿದ್ದಾರೆ. ವೈಯಕ್ತಿಕ ಕಿರುಕುಳದ ತೀವ್ರ ಪ್ರಕರಣಗಳು ವರದಿಯಾಗಿವೆ. ವಿಶೇಷವಾಗಿ ಬೆಂಗಳೂರಿನ ಐಐಎಂನ ವೈವಿಧ್ಯತೆ ಮತ್ತು ಒಳಗೊಳ್ಳುವಿಕೆಯ ಕುರಿತು ಕಳವಳಕಾರಿ ಮಾಹಿತಿ ಹೊರಬಿದ್ದಿದೆ ಎಂದು ಅಖಿಲ ಭಾರತ ಒಬಿಸಿ ವಿದ್ಯಾರ್ಥಿಗಳ ಸಂಘ ಹೇಳಿದೆ.

ತುಳಿತಕ್ಕೊಳಗಾದ ಸಮುದಾಯಗಳ ವಿರುದ್ಧ, ನಿರ್ದಿಷ್ಟವಾಗಿ ಪರಿಶಿಷ್ಟ ಜಾತಿಗಳು (ಎಸ್), ಪರಿಶಿಷ್ಟ ಪಂಗಡಗಳು (ಎಸ್‌ಟಿ), ಮತ್ತು ಇತರ ಹಿಂದುಳಿದ ವರ್ಗಗಳ (ಒಬಿಸಿ) ವಿರುದ್ಧದ ತಾರತಮ್ಯವನ್ನು ಪರಿಹರಿಸಲು ವಿಫಲವಾದ ಆರೋಪ ಹೊತ್ತಿರುವ ಬೆಂಗಳೂರು ಐಐಎಂ ಆಡಳಿತ ಮಂಡಳಿಯ ಅಧ್ಯಕ್ಷ ದೇವಿಪ್ರಸಾದ್ ಶೆಟ್ಟಿ, ನಿರ್ದೇಶಕ ರಿಷಿಕೇಶ ಟಿ ಕೃಷ್ಣನ್ ಮತ್ತು ಡೀನ್ (ಅಧ್ಯಾಪಕ) ದಿನೇಶ್ ಕುಮಾರ್ ಸೇರಿದಂತೆ ಪ್ರಮುಖ ನಾಯಕತ್ವದ ವ್ಯಕ್ತಿಗಳನ್ನು ತಕ್ಷಣವೇ ಹುದ್ದೆಯಿಂದ ತೆಗೆದು ಹಾಕಬೇಕು ಎಂಬುವುದು ನಮ್ಮ ಪ್ರತಿಭಟನೆಯ ಪ್ರಾಥಮಿಕ ಬೇಡಿಕೆ ಎಂದು ಅಖಿಲ ಭಾರತ ಒಬಿಸಿ ವಿದ್ಯಾರ್ಥಿಗಳ ಸಂಘ ಮಾಹಿತಿ ನೀಡಿದೆ.

## ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾದ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾದ ಬಸವರಾಜ ಎಸ್.ಅಂಗಡಿ, ಗೌರವ ಕಾರ್ಯದರ್ಶಿ ಮುರುಘರಾಜೇಂದ್ರ ಎಂ.ಬಡ್ನಿ ಹಾಗೂ ಕೋಶಾಧ್ಯಕ್ಷ ಚನ್ನವೀರಪ್ಪ ಪ್ರ.ಹುಣಸಿಕಟ್ಟಿ ಇವರಿಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಆಡಳಿತ ಮಂಡಳಿ ಸಭೆಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ವಹಿಸಿದ್ದರು. ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್.ಗುಡಿಮನಿ,




ವಿಜಯಕುಮಾರ ಎಸ್. ಮಾಟಲದಿನ್ನಿ, ಎಸ್.ಆರ್. ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿ ಸೋಮನಾಥ ಕೆ.ಜಾಲಿ, ರಾಘವೇಂದ್ರ ಎಸ್. ಕಾಲವಾಡ, ಸಂಸ್ಥೆಯ ಮಾಜಿ ಅಧ್ಯಕ್ಷ ಸಂಗಮೇಶ ದುಂದೂರ, ಶರಬಸಪ್ಪ ಕೆ.ಕುರಡಗಿ, ರಾಮನಗೌಡ ಬಿ. ದಾನಪ್ಪಗೌಡ್ರ, ಮಲ್ಲಿಕಾರ್ಜುನ ಬಿ.ಸುರಕೋಡ ಮುಂತಾದವರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಚನಗಳನ್ನು ತಿರುಚುವ ಸಾಹಸ ಬೇಡ : ಎಂ.ಬಿ. ಪಾಟೀಲ್ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



"ಸಂಘ ಪರಿವಾರದವರು 'ವಚನ ದರ್ಶನ' ಪುಸ್ತಕದ ಮೂಲಕ ನಮ್ಮ ವಚನಗಳನ್ನು ತಿದ್ದಲು ಹೊರಟಿದ್ದಾರೆ. ವಚನಗಳು ನಮ್ಮ (ಲಿಂಗಾಯತ) ಅಸ್ಮಿತೆ. ನಮ್ಮ ಅಸ್ಮಿತೆ ಜೊತೆ ಆಟ ಬೇಡ" ಎಂದು ಸಚಿವ ಎಂ.ಬಿ ಪಾಟೀಲ್ ಎಚ್ಚರಿಕೆ ನೀಡಿದ್ದಾರೆ. ಗುರುವಾರ (ನ.8) ವಿಜಯಪುರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,"ಬಿಜೆಪಿಯ ಬಿ.ಎಲ್. ಸಂತೋಷ್ ಅವರೇ, ನಿಮ್ಮ ಅಸ್ಮಿತೆಯಾದ ವೇದ, ಉಪನಿಷತ್ ಎಲ್ಲವನ್ನೂ ನಾವು ಗೌರವಿಸುತ್ತೇವೆ. ಅವುಗಳ ಕುರಿತು ನೀವು ಪ್ರಚಾರ ಮಾಡಿ. ನಮ್ಮ ಬಸವಾದಿ ಶರಣರ ವಚನಗಳು ನಮ್ಮ ಅಸ್ಮಿತೆಯಾಗಿದ್ದು, ಅವು ನಮಗೆ ತಾಯಿಯಿದ್ದಂತೆ. ಅದನ್ನು ತಿದ್ದಿಸುವುದು, ಅದರಲ್ಲಿ ಹಸ್ತಕ್ಷೇಪ ಮಾಡುವಂತಹ ಕೆಟ್ಟ ಕೆಲಸಕ್ಕೆ ನೀವು ಕೈ ಹಾಕಿದರೆ ಅದನ್ನು ನಾವು ಸಹಿಸುವುದಿಲ್ಲ!" ಎಂದಿದ್ದಾರೆ.

ಬಿಜೆಪಿ ಮತ್ತು ಬಿ.ಎಲ್ ಸಂತೋಷ್ ನಮ್ಮ ಕೆಲವು ಸ್ವಾಮಿಗಳನ್ನು ಬುಟ್ಟಿಗೆ ಹಾಕಿಕೊಂಡು ಇಂತ ಕೆಟ್ಟ ಕೆಲಸಕ್ಕೆ ಕೈ ಹಾಕಿದ್ದಾರೆ. ಬಿ.ಎಲ್ ಸಂತೋಷ್ ನಿಮ್ಮ ಅಸ್ಮಿತೆ ನಿಮಗೆ ಮುಖ್ಯ. ನಮ್ಮ ಅಸ್ಮಿತೆ ನಮಗೂ ಮುಖ್ಯ. ವೇದ, ಭಗವದ್ಗೀತೆ ನಿಮ್ಮ ಅಸ್ಮಿತೆ. ಅದನ್ನು ಹೇಗೆ ಬೇಕಾದರೂ ಪ್ರಚಾರ ಮಾಡಿ. ಆದರೆ, ನಮ್ಮ ಅಸ್ಮಿತೆಗೆ ಕೈ ಹಾಕಿದರೆ ಅದು ನಿಮಗೆ ತಿರುಗು ಬಾಣ ಅಗಲಿದೆ ಎಂದು ಕಿಡಿಕಾಡಿದ್ದಾರೆ.

ನಮ್ಮ ಅಸ್ಮಿತೆಯ ಬಗ್ಗೆ ತಪ್ಪಾಗಿ ಪ್ರಚಾರ ಮಾಡಿದರೆ, ನಿಮ್ಮ ಮನುವಾದ, ಮನುಸ್ಮೃತಿಗಳ ಬಗ್ಗೆ ನಾವೂ ಪುಸ್ತಕ ಪ್ರಿಂಟ್ ಮಾಡಿ ಜನರ ಮುಂದೆ ಇಡಬೇಕಾಗುತ್ತದೆ. ನಿಮ್ಮದು ಸುಳ್ಳಿನ ಅಸ್ಮಿತೆಯಾದರೆ, ನಮ್ಮದು ಸತ್ಯ ಎಂದಿದ್ದಾರೆ. ವಚನ ದರ್ಶನದ ಪುಸ್ತಕದ ಬಗ್ಗೆ ಚುನಾವಣೆ ಮುಗಿದ ಬಳಿಕ ನಾನೇ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ಮಾತನಾಡುತ್ತೇನೆ. ಈ ಬಗ್ಗೆ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಕರೆಯುತ್ತೇನೆ ಎಂದು ತಿಳಿಸಿದ್ದಾರೆ.

## ಗದಗ ಪ್ರೀಮಿಯರ್ ಲೀಗ್–2 ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ವಿಮಲ್ ರೆಸಾರ್ಟ್ ಪ್ರಾಯೋಜಕತ್ವದಲ್ಲಿ ಗದಗ ಪ್ರೀಮಿಯರ್ ಲೀಗ್ 2ನೇ ಆವೃತ್ತಿಯನ್ನು ಆನಂದ ಪೋತ್ನಿಸ್, ಪಿ.ಆರ್. ಅಡವಿ, ಹಾಗೂ ಭೂಷಣ ಶಾ ಉದ್ಘಾಟಿಸಿದರು. ಮೊದಲ ಪಂದ್ಯ ಗದಗ ಕ್ರಷರ್ಸ್ ಮತ್ತು ಗದಗ ವಲ್ಚರ್ಸ್ ನಡುವೆ ನಡೆಯಿತು. ಕ್ರಷರ್ಸ್ ತಂಡ ಮೊದಲು ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡಿತು. ಕ್ರಷರ್ಸ್ ತಂಡದ ಪರ ಅನಿತ್ 25, ಕಾರ್ತಿಕ 21 ಹಾಗೂ ಅಲ್ತಮಷ್ 24 ರನ್ ಗಳಿಸಿದರು. ಬೌಲಿಂಗ್‌ನಲ್ಲಿ ವಲ್ಚರ್ಸ್ ಪರ ಪವನ 4 ಹಾಗೂ ವಿನಯ 2



ವಿಕೆಟ್ ಪಡೆದರು. ಉತ್ತರ ಬ್ಯಾಟಿಂಗ್‌ಗೆ ಇಳಿದ ವಲ್ಚರ್ಸ್ ತಂಡದ ವಿನಯ ಬಾರಕೇರ 27, ಜೇಯೇಶ 22 ರನ್ ಗಳಿಸಿದರು. ಬೌಲಿಂಗ್‌ನಲ್ಲಿ ಪ್ರಜ್ವಲ್ ಮಿಟ್ಟಿ 3, ರಾಮು ಬೆನಹಾಳ 3 ವಿಕೆಟ್ ಪಡೆದು ಮಿಂಚಿದರು. ಕ್ರಷರ್ಸ್ ತಂಡ 55 ರನ್‌ಗಳ ಸುಲಭ ಜಯ ಸಾಧಿಸಿತು. ಪಂದ್ಯ ಪುರುಷೋತ್ತಮ ಪ್ರಶಸ್ತಿಯನ್ನು ಪ್ರಜ್ವಲ್ ಮಿಟ್ಟಿ ಪಡೆದರು.

2ನೇ ಪಂದ್ಯ ಗದಗ ಟೈಟನ್ಸ್ ಹಾಗೂ ಗದಗ ಸ್ಟ್ರೈಕರ್ಸ್ ನಡುವೆ ನಡೆಯಿತು. ಗದಗ ಸ್ಟ್ರೈಕರ್ಸ್ ತಂಡ ಟಾಸ್ ಗೆದ್ದು ಬ್ಯಾಟಿಂಗ್ ಮಾಡಿತು. ಸ್ಟ್ರೈಕರ್ಸ್ ತಂಡದ ಪರ ಕಿರಣ ಆಸಂಗಿ 33, ರವಿ ರಾಮಗಿರಿ 19 ರನ್ ಮಾಡಿದರು. ಸಮೀರ 2, ಕಾರ್ತಿಕ 1 ವಿಕೆಟ್ ಪಡೆದರು. ಉತ್ತರವಾಗಿ ಬ್ಯಾಟಿಂಗ್‌ಗೆ ಇಳಿದ ಟೈಟನ್ಸ್ ತಂಡ ಜೈದ ಅತ್ತಾರ 44, ಜರಿಯಾನ್ 27 ರನ್ ಗಳಿಸಿದರು. ಶಿವು ಹಾಗೂ ಸತೀಶಕುಮಾರ ತಲಾ ಒಂದು ವಿಕೆಟ್ ಪಡೆದರು. ಟೈಟನ್ಸ್ ತಂಡ 7 ವಿಕೆಟ್ ಜಯಗಳಿಸಿತು. ಪಂದ್ಯ ಪುರುಷೋತ್ತಮ ಪ್ರಶಸ್ತಿಯನ್ನು ಜೈದ ಅತ್ತಾರ ಪಡೆದರು.

### ಹಿರೇವಡ್ಡಟ್ಟಿ ಗ್ರಾಮದಲ್ಲಿ ಮೃತ್ಯುಂಜಯ ಮಹಾಸ್ವಾಮಿಗಳ ಜಯಂತ್ಯುತ್ಸವ

# ಆಧ್ಯಾತ್ಮಿಕ ಪ್ರವಚನ ಇಂದಿನಿಂದ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಇಲ್ಲಿನ ಹಿರೇವಡ್ಡಟ್ಟಿ ಗ್ರಾಮದಲ್ಲಿ ನಿರಂಜನ ಜ್ಯೋತಿ ಮ.ನಿ.ಪ್ರ. ಮೃತ್ಯುಂಜಯ ಮಹಾಸ್ವಾಮಿಗಳವರ ಜಯಂತ್ಯುತ್ಸವ ಹಾಗೂ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮವು ನ.10ರಿಂದ 17ರವರೆಗೆ ಪ್ರತಿದಿನ ಸಾಯಂಕಾಲ 7ರಿಂದ 8ಗಂಟೆಯವರೆಗೆ ಜಗದ್ಗುರು ಅನ್ನದಾನೀಶ್ವರ ವಿದ್ಯಾಸಂಸ್ಥೆಯ ಕೆ.ಕೆ. ನಂದಿಕೋಲ ಪ್ರೌಢಶಾಲೆ ಮೈದಾನದಲ್ಲಿ ಪ್ರವಚನ ಮಣಕವಾಡದ, ಹಿರೇವಡ್ಡಟ್ಟಿ ಶ್ರೀಮ.ನಿ.ಪ್ರ.ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳಿಂದ ಜರುಗಲಿದೆ.

ನ.10ರಂದು ನಾಡೋಜ ಜಗದ್ಗುರು ಡಾ.ಅನ್ನದಾನೇಶ್ವರ ಮಹಾಸ್ವಾಮಿಗಳು ಉದ್ಘಾಟನೆ ನೆರವೇರಿಸುವರು. ಪ್ರವಚನ





ಮಣಕವಾಡದ, ಹಿರೇವಡ್ಡಟ್ಟಿ ಶ್ರೀಮ.ನಿ.ಪ್ರ.ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು, ಶ್ರೀ ಷ.ಬ್ರ.ವೀರೇಶ್ವರ ಶಿವಾಚಾರ್ಯ ಶ್ರೀ, ನೇತೃತ್ವ ಗದಗ ಆಧ್ಯಾತ್ಮ ವಿದ್ಯಾಶ್ರಮದ ಶಿವಶರಣೆ ಡಾ.ನೀಲಮ್ಮ ತಾಯಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಡಾ. ಎ.ಸಿ. ಚಾಕಲಬ್ಬಿ, ಡಾ.ಉಮೇಶ ಪುರದ, ಗೌಸುಸಾಬ ದೊಟಿಹಾಳ, ಮಹೇಶ ನರಿಬೋಳ, ತೋಟೆಂದ್ರಕುಮಾರ ಕರಡಕರ್, ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಪಾಲ್ಗೊಳ್ಳುವರು.

ನ.17ರ ಜಯಂತ್ಯುತ್ಸವ ಹಾಗೂ ಪ್ರವಚನ ಮುಕ್ತಾಯ ಕಾರ್ಯಕ್ರಮದ ಸಾನ್ನಿಧ್ಯವನ್ನು ಹುಕ್ಕೇರಿ ಮಠದ ಸದಾಶಿವ ಮಹಾಸ್ವಾಮಿಗಳು, ಹುಬ್ಬಳ್ಳಿಯ ಸದ್ಗುರು ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು ವಹಿಸುವರು. ಸಮ್ಮುಖವನ್ನು ಮಹೇಶ್ವರ ಶಿವಾಚಾರ್ಯ ಶ್ರೀಗಳು, ಚನ್ನಬಸವ ದೇವರು, ಮಲ್ಲಿಕಾರ್ಜುನಸ್ವಾಮಿ ವಹಿಸುವರು. ಅಧ್ಯಕ್ಷತೆಯನ್ನು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್, ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ, ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್, ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ, ಮಾಜಿ ಸಚಿವ ಕಳಕಪ್ಪ ಬಂಡಿ, ಶಾಸಕ ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಕೆ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ್, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಉದ್ಯಮಿ ಮಂಜುನಾಥ ಹರ್ಲಾಪೂರ, ರಾಜೇಶ ಹರ್ಲಾಪುರ ಮುಂತಾದವರು ಪಾಲ್ಗೊಳ್ಳುವರು.

ಮಹನ್ಯಾ ಗುರು ಪಾಟೀಲ್‌ರಿಂದ ಸಂಗೀತ ಸಂಜೆ ಕಾರ್ಯಕ್ರಮ ಜರುಗಲಿದೆ ಎಂದು ಜಯಂತ್ಯುತ್ಸವ ಹಾಗೂ ಆಧ್ಯಾತ್ಮಿಕ ಪ್ರವಚನ ಸಮಿತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ನ.16ರಂದು ಉಡಿ ತುಂಬುವ ಕಾರ್ಯಕ್ರಮದ ಸಾನ್ನಿಧ್ಯವನ್ನು ಪ್ರಭುಶಾಂತ ಶ್ರೀಗಳು ವಹಿಸುವರು. ಅತಿಥಿಗಳಾಗಿ ಉದ್ಯಮಿ ಆನಂದಸ್ವಾಮಿ ಗಡ್ಡದೇವರಮಠ, ಟಿ. ಈಶ್ವರ, ಸಂಯುಕ್ತ ಬಂಡಿ, ಶಶಿಕಲಾ ಪಾಟೀಲ್, ಶೋಭಾ ಮೇಟಿ, ಗ್ರಾ.ಪಂ ಅಧ್ಯಕ್ಷೆ ನಾಗವ್ವ ವೆಂ.ಬಳ್ಳಾರಿ, ಕೆ.ವಿ. ಹಂಚಿನಾಳ, ನಾಗೇಶ ಹುಬ್ಬಳ್ಳಿ, ಹೇಮಂತಗೌಡ ಪಾಟೀಲ್, ಆನಂದಗೌಡ ಪಾಟೀಲ್, ಡಿ.ಡಿ. ಮೋರನಾಳ, ಹೇಮಗಿರಿಷ ಹಾವಿನಾಳ, ರವಿ ಕರಿಗಾರ, ರಾಜು ಕುರಡಗಿ, ಸದಾಶಿವಯ್ಯ ಮದರಿಮಠ, ಎಸ್.ಎಚ್. ಶಿವನಗೌಡರ, ಕಿರಣ ಪ್ರಕಾಶ ಬೂಮಾ, ಶರಣಪ್ಪ ಸಾಸನೂರ, ಸುರೇಶ ನಾಯ್ಕರ, ಸೋಮರಡ್ಡಿ ನಡೂರ, ಮದರಸಾಬ ಸಿಂಗನಮಲ್ಲಿ ಪಾಲ್ಗೊಳ್ಳುವರು.

# ಧಾರ್ಮಿಕ ಚಿಂತನೆಗಳನ್ನು ಮೈಗೂಡಿಸಿಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಾನವ ಮಾನವೀಯ ಮೌಲ್ಯಗಳೊಂದಿಗೆ ಧಾರ್ಮಿಕ, ಸಾಮಾಜಿಕ, ಆಧ್ಯಾತ್ಮಿಕ ಚಿಂತನೆಗಳೊಂದಿಗೆ ಉತ್ತಮ ಹಾದಿಯಲ್ಲಿ ಮುನ್ನಡೆಯಬೇಕಾದರೆ ನಾವು 'ಏನಾದರೂ ಆಗು, ಮೊದಲು ಮಾನವನಾಗು' ಎಂಬ ಕವಿವಾಣಿಯಂತೆ ದಾನ-ಧರ್ಮ ಮಾಡುವುದರ ಮೂಲಕ ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಪೂಜ್ಯ ಶ್ರೀ ಶಿವಶಾಂತವೀರ ಶರಣರು ಹೇಳಿದರು.

ಅವರು ಸುಕ್ಷೇತ್ರ ಬಳಗಾನೂರನಲ್ಲಿ ಶುಕ್ರವಾರ ನೂತನವಾಗಿ ಜೀರ್ಣೋದ್ಧಾರಗೊಂಡ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಕಟ್ಟಡವನ್ನು ಉದ್ಘಾಟಿಸಿ ನಂತರ ಧಾರ್ಮಿಕ ಚಿಂತನ ಗೋಷ್ಠಿಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಾಗಲಕೋಟೆ ಲೋಕಸಭಾ ಸಂಸದರಾದ ಪಿ.ಸಿ. ಗದ್ದಿಗೌಡರ್ ಮಾತನಾಡಿ, ಸುಕ್ಷೇತ್ರ ಬಳಗಾನೂರ ಗ್ರಾಮದಲ್ಲಿ ಧಾರ್ಮಿಕ, ಆಧ್ಯಾತ್ಮಿಕ, ಸಾಮಾಜಿಕ ಕಾರ್ಯ ಚಟುವಟಿಕೆಗಳು ನಡೆಯುತ್ತಿರುವುದು ನಮ್ಮೆಲ್ಲರಿಗೂ ಬಹಳ ಸಂತೋಷವಾಗುತ್ತಿದೆ. ಸಾಮಾಜಿಕ, ಧಾರ್ಮಿಕ ಕಾರ್ಯದಲ್ಲಿ ಪಾಲ್ಗೊಂಡು ಪುನೀತರಾಗಬೇಕು. ಗ್ರಾಮದ ಶ್ರೇಯೋಭಿವೃದ್ಧಿಗಾಗಿ ಒಗ್ಗಟ್ಟಿನಿಂದ ಕಾರ್ಯವನ್ನು ಕೈಗೊಂಡರೆ ಎಲ್ಲಾ ಕಾರ್ಯಗಳು ಸುಗಮವಾಗಿ ಈಡೇರುವವು. ಸುಕ್ಷೇತ್ರ ಬಳಗನೂರು ಗ್ರಾಮ ಮಾದರಿಯಾಗಿದೆ. ಶ್ರೀ ವೀರಭದ್ರೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಸಂತೋಷವನ್ನು ತಂದಿದೆ ಎಂದರು.

ಶ್ರೀ ಶಿವಕುಮಾರ ಸ್ವಾಮೀಜಿ, ಸೊರಬ ತಾಲೂಕಿನ ಹಿರೇಮಾಗಡಿಯ ಪೂಜ್ಯ ಶ್ರೀ ಮುರುಗರಾಜೇಂದ್ರ ಶ್ರೀಗಳು, ವೇ.ಮೂ.ಶ್ರೀ.ಚೆನ್ನಯ್ಯ ಶಾಂತನಮಠ ಸೇರಿದಂತೆ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಡಾ. ಹನುಮಂತಗೌಡ ಆರ್.ಕಲ್ಮನಿ ಪ್ರಸ್ತಾವಿಕವಾಗಿ ಮಾತನಾಡಿದರು. ಶ್ರೀ ವೀರಭದ್ರೇಶ್ವರ ಟ್ರಸ್ಟ್ ಅಧ್ಯಕ್ಷ ಶಂಕರಗೌಡ ಕಾಶೀಗೌಡರ, ಕಾರ್ಯದರ್ಶಿ ಡಾ. ಶಿವಕುಮಾರ್ ಹಿರೇಮಠ, ಎಸ್.ಬಿ. ಚಟ್ರಿ ಹಾಗೂ ಎಂ.ಎ. ಪಾಟೀಲರವರು ದೇವಸ್ಥಾನಕ್ಕೆ ದೇಣಿಗೆ ನೀಡಿದ ಸದ್ಭಕ್ತರನ್ನು ಸನ್ಮಾನಿಸಿದರು. ಪ್ರೊ. ಎಂ.ಬಿ. ಮಡಿವಾಳ ಸ್ವಾಗತಿಸಿದರು. ಪ್ರೊ.ವಿಜಯಕುಮಾರ್ ಕರುಮಡಿ ನಿರೂಪಿಸಿದರು.

### ಅವ್ವ ಸಮಾಜಸೇವಾ, ಸಾಂಸ್ಕೃತಿಕ ಪ್ರತಿಷ್ಠಾನದ ಉದ್ಘಾಟನಾ ಸಮಾರಂಭದಲ್ಲಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ

# ಆತ್ಮವಿಶ್ವಾಸದಿಂದ ಅಧ್ಯಯನದಲ್ಲಿ ತೊಡಗಿ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಇಂದು ಎಲ್ಲ ರಂಗಗಳಲ್ಲಿಯೂ ಸ್ಪರ್ಧೆ ಅನಿವಾರ್ಯವಾಗಿದೆ. ಸತತ ಅಧ್ಯಯನಶೀಲರಾದರೆ ಮಾತ್ರ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಲು ಸಾಧ್ಯ. ಆದ್ದರಿಂದ ವಿದ್ಯಾರ್ಥಿಗಳು ಸದಾ ಶ್ರದ್ಧೆ, ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ನಿರಂತರವಾಗಿ ಅಧ್ಯಯನದಲ್ಲಿ ತೊಡಗಿಕೊಳ್ಳಬೇಕು ಎಂದು ಕೊಪ್ಪಳ ಜಿಲ್ಲಾ ಉಪ ವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಹೇಳಿದರು. ಪಟ್ಟಣದ ಕ.ರಾ.ಬೆಲ್ಲದ ಮಹಾವಿದ್ಯಾಲಯದಲ್ಲಿ ಅವ್ವ ಸಮಾಜ ಸೇವಾ ಹಾಗೂ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಅವ್ವ ಸಮಾಜಸೇವಾ ಹಾಗೂ ಸಾಂಸ್ಕೃತಿಕ ಪ್ರತಿಷ್ಠಾನದ ಉದ್ಘಾಟನೆ, ಸಾಧಕ ತಾಯಂದಿರ ಸನ್ಮಾನ ಕಾರ್ಯಕ್ರಮ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ವಿಶೇಷ ಉಪನ್ಯಾಸ ಸಮಾರಂಭದಲ್ಲಿ ಅವರು ಮಾತನಾಡಿದರು.

ಗ್ರಾಮೀಣ ವಿದ್ಯಾರ್ಥಿಗಳಲ್ಲಿ ಕೀಳರಿಮೆ ಇರುತ್ತದೆ. ಅದನ್ನು ಬದಿಗೊತ್ತಿ ಧೈರ್ಯದಿಂದ ಅಧ್ಯಯನದಲ್ಲಿ ತೊಡಗಬೇಕು. ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಹಾಗೂ ಸಿದ್ಧತೆ ಕುರಿತಂತೆ ಹಲವಾರು ಸೌಲಭ್ಯಗಳಿದ್ದು, ವಿದ್ಯಾರ್ಥಿಗಳು ಅವುಗಳ



ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.ದಿವ್ಯ ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಅನ್ನದಾನೀಶ್ವರ ಮಹಾಶಿವಯೋಗಿಗಳು ಮಾತನಾಡಿ, ಮುರಡಿ ಕುಟುಂಬ ವರ್ಗದವರು ತಮ್ಮ ತಾಯಿ ಲಿಂ.ಬಸಮ್ಮನವರ ನೆನಪಿನಲ್ಲಿ ಅವ್ವ ಸಮಾಜ ಸೇವಾ ಹಾಗೂ ಸಾಂಸ್ಕೃತಿಕ ಪ್ರತಿಷ್ಠಾನ ಸ್ಥಾಪಿಸಿ ಆ ಮೂಲಕ ಸಾಮಾಜಿಕ ಕಾರ್ಯಕ್ಕೆ ಮುಂದಾಗುತ್ತಿರುವುದು ಸಂತಸದ ಸಂಗತಿಯಾಗಿದೆ. ಪ್ರತಿಷ್ಠಾನದ ವತಿಯಿಂದ ಸದಾ ಸಮಾಜಮುಖಿ ಕಾರ್ಯಗಳು ನಡೆಯಲಿ ಎಂದು ಆಶಿಸಿದರು.ಪುರಸಭೆ ಉಪಾಧ್ಯಕ್ಷ ನಾಗೇಶ ಹುಬ್ಬಳ್ಳಿ ಮಾತನಾಡಿ, ಜಗತ್ತಿನಲ್ಲಿ ತಾಯಿಯ ಋಣ ತೀರಿಸಲು ಯಾರಿಂದಲೂ ಸಾಧ್ಯವಿಲ್ಲ. ತಂದೆ, ತಾಯಿಗೆ ಉತ್ತಮ ಮಕ್ಕಳಾಗಿ, ನಾಡಿಗೆ ಉತ್ತಮ ಪ್ರಜೆಗಳಾಗಿ ಬಾಳಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷ ನಾಗರಾಜ ಮುರಡಿ ಮಾತನಾಡಿ, ಈ ಪ್ರತಿಷ್ಠಾನ ಮೂಲಕ ಸಮಾಜಕ್ಕೆ ನಮ್ಮ ಕೈಲಾದ ಮಟ್ಟಿಗೆ ಸೇವೆಯನ್ನು ಸಲ್ಲಿಸಬೇಕು ಎನ್ನುವ ನಿಟ್ಟಿನಲ್ಲಿ ಮುನ್ನಡೆಯಲಿದ್ದೇವೆ. ಪ್ರತಿಯೊಬ್ಬರು ಸಹಕಾರ ನೀಡಬೇಕು ಎಂದು ತಿಳಿಸಿದರು. ಸಮಾರಂಭದಲ್ಲಿ ಪ್ರತಿಷ್ಠಾನದ ವತಿಯಿಂದ ಪಟ್ಟಣದ ಜಯಶ್ರೀ ಅಳವಂಡಿ ಹಾಗೂ ಪಾರ್ವತಿ ಕಾಗನೂರಮಠ ಅವರಿಗೆ 'ತ್ಯಾಗಮಯಿ ಸಾಧಕ ತಾಯಿ' ಎಂದು ಗೌರವಿಸಿ ಸನ್ಮಾನಿಸಲಾಯಿತು. ಖುಷಿ ಮುರಡಿ ಭರತನಾಟ್ಯ ಸಾದರ ಪಡಿಸಿದರು. ಪುರಸಭೆ ಅಧ್ಯಕ್ಷೆ ನಿರ್ಮಲಾ ಕೊರ್ಲಹಳ್ಳಿ, ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ನಾಗರಾಜ ಹಳ್ಳಿಕೇರಿ, ಕಾಲೇಜು ಮೇಲ್ವಿಚಾರಣಾ ಸಮಿತಿ ಉಪ ಕಾಯಾಧ್ಯಕ್ಷ ವಿ.ಎಫ್. ಗುಡದಪ್ಪನವರ, ಪ್ರಾಚಾರ್ಯ ಡಾ. ಡಿ.ಸಿ. ಮಠ, ಉಪನ್ಯಾಸಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಗಾಯಕಿ ನಯನಾ ಅಳವಂಡಿ ಪ್ರಾರ್ಥಿಸಿದರು. ಪತ್ರಕರ್ತ ಸಂತೋಷ ಮುರಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹ ಪ್ರಾಧ್ಯಾಪಕ ಡಾ.ಸಂತೋಷ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಜಗತ್ತಿನಲ್ಲಿರುವ ಎಲ್ಲ ಮಹಾತ್ಮರು, ಸ್ವಾಮೀಜಿಗಳು, ರಾಜಕಾರಣಿಗಳು, ಶ್ರೀಮಂತರು ತಾಯಿಯ ಗರ್ಭದಿಂದಲೇ ಜನಿಸಿರುತ್ತಾರೆ. ತಾಯಿ, ತಂದೆಯನ್ನು ಮುಪ್ಪಿನ ಕಾಲದಲ್ಲಿ ಚೆನ್ನಾಗಿ ನೋಡಿಕೊಳ್ಳಬೇಕು. ಮಕ್ಕಳು ತಂದೆ-ತಾಯಿಗಳನ್ನು ಪ್ರೀತಿ, ಗೌರವದಿಂದ ಕಾಣಬೇಕು ಎಂದು ತಿಳಿಸಿದರು.

# ಆ್ಯಂಗ್ಲೋ ಉರ್ದು ಪ್ರೌಢಶಾಲೆಯಲ್ಲಿ 'ಉರ್ದು ದಿನಾಚರಣೆ'

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆ್ಯಂಗ್ಲೋ ಉರ್ದು ಬಾಲಕ/ಬಾಲಕಿಯರ ಪ್ರೌಢಶಾಲೆಯಲ್ಲಿ ಶನಿವಾರ ಉರ್ದು ಕವಿ ಡಾ. ಅಲ್ಲಾಮಾ ಮೊಹ್ಮದಇಕ್ಬಾಲ್‌ರವರ ಜನ್ಮದಿನದ ನಿಮಿತ್ತ ಉರ್ದು ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಉರ್ದು ಶಿಕ್ಷಕರಾದ ಜನಾಬ ಎಂ.ಎಂ. ಪೀರಜಾದೆ ಪ್ರಾಸ್ತಾವಿಕವಾಗಿ ಮಾತನಾಡುತ್ತ, ಉರ್ದು ಸಾಹಿತ್ಯಕ್ಕಾಗಿ ಡಾ. ಅಲ್ಲಾಮಾ ಇಕ್ಬಾಲರವರ ಕೊಡುಗೆ ಅಪೂರ್ವವಾಗಿದೆ. ಅಲ್ಲದೇ ಉರ್ದು ಸುಂದರ ಭಾಷೆಯಾಗಿದ್ದು, ಇಡೀ ವಿಶ್ವದಲ್ಲಿಯೇ ಮಾತನಾಡುವ ಭಾಷೆಯಾಗಿದೆ.




ಆದ್ದರಿಂದ ನಾವೆಲ್ಲ ಉರ್ದು ಸಾಹಿತ್ಯವನ್ನು ಓದಬೇಕೆಂದು ತಿಳಿಹೇಳಿದರು.

ಪ್ರೌಢಶಾಲೆಯ ಬಾಲಕ-ಬಾಲಕಿಯರು ಉರ್ದು ಭಾಷೆಯ ಕುರಿತು ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಎರಡೂ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು, ಎಲ್ಲ ಶಿಕ್ಷಕರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಜನಾಬ ಎಂ.ಎ. ರಿಕಾರ್ಟಿ ಸ್ವಾಗತಿಸಿದರು. ನಫೀಸಾ ಕದಡಿ ನಿರೂಪಿಸಿದರು. ಜನಾಬ ಝುಡ್ ಎ.ಮುಲ್ಲಾ ವಂದಿಸಿದರು.

# ಮೆಡಿಕಲ್ ಕೋರ್ಸ್ ಉದ್ಘಾಟನಾ ಸಮಾರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಲಕೋಟಿಯ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿಯ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ಹುಲಕೋಟಿಯಲ್ಲಿ 5ನೇ ಬ್ಯಾಚ್‌ನ ಪ್ರಥಮ ಸೆಮಿಸ್ಟರ್‌ನ ಃಛಿ ನರ್ಸಿಂಗ್ ಮತ್ತು 4ನೇ ಬ್ಯಾಚಿನ ಪ್ರಥಮ ವರ್ಷದ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳ ಕೋರ್ಸ್ ಓರಿಯೆಂಟೇಷನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆರ್‌ಎಮ್‌ಎಸ್‌ಎಸ್ ಇನ್ಸಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್‌ನ ಪ್ರಾಂಶುಪಾಲರಾದ ಡಾ. ಭಾವನಾ




ಕೋನಾ ಪಾಲ್ಗೊಂಡಿದ್ದರು. ಅಧ್ಯಕ್ಷತೆಯನ್ನು ಆರ್‌ಎಮ್‌ಎಸ್‌ಎಸ್ ಇನ್ಸಿಟ್ಯೂಟ್‌ನ ಅಧ್ಯಕ್ಷ ಡಾ. ಎಸ್. ಆರ್. ನಾಗನೂರ ವಹಿಸಿದ್ದರು. ಡಾ. ವೆಮನ್ ಸಾವಕಾರ್, ಪ್ರಾಂಶುಪಾಲ ಬಸಯ್ಯ ಹಿರೇಮಠ ವೇದಿಕೆಯಲ್ಲಿದ್ದರು.

ಸಭಾ ಕಾರ್ಯಕ್ರಮದ ನಂತರ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಪ್ರಾಂಶುಪಾಲ ಬಸಯ್ಯ ಹಿರೇಮಠ ಹಾಗೂ ಸಹ ಪ್ರಾಧ್ಯಾಪಕಿ ಕುಸುಮಾ ವಿದ್ಯಾರ್ಥಿಗಳಿಗೆ ಐಎನ್‌ಸಿಯಿಂದ ಪರಿಷ್ಕರಿಸಲ್ಪಟ್ಟ ಪಠ್ಯ ವಿಷಯದ ಗ್ರೇಡ್ ಮತ್ತು ಕ್ರೆಡಿಟ್ ವ್ಯವಸ್ಥೆಯನ್ನು ವಿವರಿಸಿದರು. ಇನ್ನೋರ್ವ ಸಹ ಪ್ರಾಧ್ಯಾಪಕಿ ಸುಮಾ ಪ್ರತಿ ವಿಷಯದ ಇಂಟರ್ನಲ್ ಅಸೆಸ್ಮೆಂಟ್ ಹಾಗೂ ವಿದ್ಯಾರ್ಥಿಗಳಿಗೆ ಬದಲಾದ ವಿಷಯಗಳ ಕುರಿತು ಗೊಂದಲಗಳನ್ನು ಪರಿಹರಿಸಿದರು.

# ಕಾಂಗ್ರೆಸ್‌ನಿಂದ ಮಾತ್ರ ಶೋಷಿತರ ರಕ್ಷಣೆ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಐದು ಪ್ರಮುಖ ಸಮಾಜಮುಖಿ ಗ್ಯಾರಂಟಿಗಳ ಮೂಲಕ ಹಿಂದುಳಿದ, ಬಡವರ ಕಲ್ಯಾಣ ಮತ್ತು ಅವರ ಬದುಕಿಗೆ ಶಕ್ತಿ ನೀಡಿದ ಸಿದ್ದರಾಮಯ್ಯ ಸರಕಾರಕ್ಕೆ ಮತ್ತಷ್ಟು ಶಕ್ತಿ ನೀಡಲು ಅನ್ನಪೂರ್ಣ ತುಕಾರಾಂ ಅವರನ್ನು ಗೆಲ್ಲಿಸಬೇಕು ಎಂದು ಗ್ಯಾರಂಟಿ ಸಮಿತಿ ಸದಸ್ಯೆ, ಕಾಂಗ್ರೆಸ್ ನಾಯಕಿ ಜ್ಯೋತಿ ಎಂ. ಗೊಂಡಬಾಳ ಮನವಿ ಮಾಡಿದರು.

ಅವರು ಸಂಡೂರು ವಿಧಾನಸಭಾ ಕ್ಷೇತ್ರದ ಅಂತಾಪುರದಲ್ಲಿ ನಡೆದ ಬಹಿರಂಗ ಸಭೆಯಲ್ಲಿ ಮಾತನಾಡಿ, ನಾಡು ಕಂಡ ಶ್ರೇಷ್ಠ ಮುಖ್ಯಮಂತ್ರಿಯಲ್ಲಿ ಸಿದ್ದರಾಮಯ್ಯ ಅವರು ಪ್ರಮುಖರು. ಇಲ್ಲಿಯ ನಾಯಕರಾದ ಸಂತೋಷ ಲಾಡ್, ತುಕಾರಾಂ ಅವರಂತಹ ಸಮಾಜ ಸೇವಾ



ಮುಖಂಡರುಗಳಿಗೆ ಕಾಂಗ್ರೆಸ್ ಬೆಂಬಲಿಸುವ ಮೂಲಕ ಸಹಕಾರ ನೀಡಬೇಕು ಎಂದ ಅವರು, ಇಂದು ಮಹಿಳೆಯರು ನಿಜವಾದ ಸ್ವಾತಂತ್ರ್ಯವನ್ನು ಅನುಭವಿಸುವಂತಾಗಿದೆ ಎಂದು ಹೇಳಿದರು.

ಮುಖಂಡ ಮಂಜುನಾಥ ಜಿ.ಗೊಂಡಬಾಳ ಮಾತನಾಡಿ, ಧರ್ಮಗಳ ನಡುವೆ ವೈಷಮ್ಯ ಬೆಳೆಸಿ ರಾಜಕೀಯ ಮಾಡುವ ಬಿಜೆಪಿಗರನ್ನು ರಾಜಕೀಯ ಅಧಿಕಾರದಿಂದ ದೂರ ಇಡದ ಹೊರತು ಸಮಾಜದಲ್ಲಿ ಶಾಂತಿ ಸಿಗದು. ಅಧಿಕಾರ ಮತ್ತು ಆಸ್ತಿ ಮಾಡಲು ಸುಖಾಸುಮ್ಮನೆ ಜನರನ್ನು ಕೆಣಕುವದು, ಮೋಸ ಮಾಡುವದು ಬಿಟ್ಟರೆ ದೇವರ ಹೆಸರಲ್ಲಿ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಸಂತೋಷ ಲಾಡ್, ಸಂಸದ ಇ. ತುಕಾರಾಂ, ಶಾಸಕರಾದ ಕಂಪ್ಲಿ ಗಣೇಶ, ಎಂ.ಪಿ. ಲತಾ ಹರಪನಹಳ್ಳಿ, ಗ್ಯಾರಂಟಿ ರಾಜ್ಯ ಉಪಾಧ್ಯಕ್ಷ ಮೆಹರೋಜ್ ಖಾನ್, ಅಭ್ಯರ್ಥಿ ಅನ್ನಪೂರ್ಣ ತುಕಾರಾಂ, ಗ್ಯಾರಂಟಿ ಸಮಿತಿ ಅಧ್ಯಕ್ಷ ಚಿದಾನಂದ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪದ್ಮಾ ಇತರರು ಇದ್ದರು.

### ಶಿವಾನುಭವ ಕಾರ್ಯಕ್ರಮದಲ್ಲಿ ತೋಂಟದ ಸಿದ್ದರಾಮ ಮಹಾಸ್ವಾಮಿಗಳು

# ಕನ್ನಡ ಕಟ್ಟುವ ಕೆಲಸವಾಗಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ನಾಡು-ನುಡಿಗೆ ಲಿಂಗಾಯತ ಧರ್ಮದ ಕೊಡುಗೆ ಅಪಾರ. ಕನ್ನಡ ಭಾಷೆ ದುಂಡು ದುಂಡಾದ ಭಾಷೆ. ವಚನಕಾರರು ಕನ್ನಡ ಭಾಷೆಯಲ್ಲಿಯೇ ವಚನಗಳನ್ನು ರಚಿಸಿದ್ದಾರೆ. ಲಿಂಗಾಯತ ಧರ್ಮ ಮತ್ತು ಕನ್ನಡದ ಬೆಳವಣಿಗೆಗೆ ಬಸವಾದಿ ಶಿವಶರಣರ ಕೊಡುಗೆ ಅಪಾರವಾದುದು ಎಂದು ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

2718ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು,



ಕನ್ನಡ ಭಾಷೆ 2000 ವರ್ಷಗಳ ಇತಿಹಾಸ ಹೊಂದಿದೆ. ಪಂಪ ಕನ್ನಡದ ಆದಿಕವಿಯಾದರೆ, ಅಕ್ಕಮಹಾದೇವಿ ಆದಿಕವಿಯಿತ್ರಿ. ಮೊದಲಿದ್ದ ಮುಂಬೈ ಕರ್ನಾಟಕ ಈಗ ಕಿತ್ತೂರು ಕರ್ನಾಟಕವಾಗಿದೆ. ಏಕೀಕರಣದ ಹೋರಾಟದಿಂದ ಕನ್ನಡ ಭಾಷೆಯನ್ನು ಆಡುವ ಪ್ರದೇಶವನ್ನು ಕರ್ನಾಟಕವೆಂದು ನಾಮಕರಣ ಮಾಡಿ ಹರಿದು ಹಂಚಿ ಹೋಗಿದ್ದ ಕನ್ನಡ ನಾಡನ್ನು ಒಂದುಗೂಡಿಸಿದರು. ಮರಾಠಿಮಯವಾಗಿದ್ದ ಕನ್ನಡ ಪ್ರದೇಶದಲ್ಲಿ ಡೆಪ್ಯುಟಿ ಚನ್ನಬಸಪ್ಪನವರು ಕನ್ನಡ ಶಾಲೆಗಳನ್ನು ತೆರೆದು ಕನ್ನಡ ಭಾಷೆಯನ್ನು ಉಳಿಸಿದ್ದಾರೆ. ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೇಕು, ಗಡಿನಾಡು ಪ್ರದೇಶದಲ್ಲಿ ಹೆಚ್ಚು ಹೆಚ್ಚು ಕನ್ನಡ ಕಟ್ಟುವ ಕೆಲಸವಾಗಬೇಕು. ಕನ್ನಡಕ್ಕಾಗಿ ಹೋರಾಡಿದ ದಿಗ್ಗಜರನ್ನು ಸ್ಮರಿಸಿಕೊಳ್ಳಬೇಕು ಎಂದರು.

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಡಾ. ಜಿ.ಬಿ. ಬೀಡನಾಳರನ್ನು ಸನ್ಮಾನಿಸಲಾಯಿತು. ಸುವರ್ಣ ಸಂಭ್ರಮ ವಿಶೇಷ ಪ್ರಶಸ್ತಿ ಪುರಸ್ಕೃತರಾದ ಜಾನಪದ ಕಲಾವಿದ ಸುರೇಶ ಠಾಕರಪ್ಪ ಲಮಾಣಿಯವರನ್ನು ಸನ್ಮಾನಿಸಲಾಯಿತು. ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನೆರವೇರಿಸಿದರು. ಧರ್ಮಗ್ರಂಥ ಪಠಣವನ್ನು ಸೌಜನ್ಯ ಎಸ್.ಹಳ್ಳಿಕೇರಿ, ವಚನ ಚಿಂತನವನ್ನು ಛಾಯಾ ಜಿ.ಜಂಗಮನಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಕನಕಶ್ರೀ ಮೆಡಿಕಲ್ ಸ್ಟೋರ್‌ನ ಶರಣ ಕರಿಯಪ್ಪ ಸಿದ್ದಲಿಂಗಪ್ಪ ಜಂಗಳಿ ವಹಿಸಿಕೊಂಡಿದ್ದರು. ಶಿವಾನುಭವ ಸಮಿತಿಯ ಚೆರಮನ್ ಐ.ಬಿ. ಬೆನಕೊಪ್ಪ ಸಂಮಾನಿತರನ್ನು ಪರಿಚಯಿಸಿದರೆ, ಉಪಾಧ್ಯಕ್ಷರಾದ ಡಾ. ಉಮೇಶ ಪುರದವರು ಕಾರ್ಯಕ್ರಮ ನಿರೂಪಿಸಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸದಸ್ಯರಾದ ಸೋಮಶೇಖರ ಪುರಾಣಿಕ, ವಿದ್ಯಾ ಗಂಜಿಹಾಳ, ಮಹೇಶ್ ಗಾಣಿಗೇರ, ನಾಗರಾಜ್ ಹಿರೇಮಠ, ಬಸವರಾಜ ಕಾಡಪ್ಪನವರು ಹಾಗೂ ಶಿವಾನಂದ ಹೊಂಬಳವರು ಮತ್ತು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರವರು ಉಪಸ್ಥಿತರಿದ್ದರು.

ಪರಮಪೂಜ್ಯ ಶ್ರೀ ರಾಚೋಟೇಶ್ವರ ಮಹಾಸ್ವಾಮಿಗಳು ವಿಶೇಷ ಕನ್ನಡ ತಿಂಗಳಿನ ಕಾರ್ಯಕ್ರಮವನ್ನು ವಿನೂತನವಾಗಿ ತಂತ್ರಾಂಶ ಬಳಸಿಕೊಂಡು ರಿಮೋಟ್ ಡಿವೈಸ್ ಉಪಯೋಗಿಸಿ ಉದ್ಘಾಟಿಸಿದರು. ಉಪನ್ಯಾಸಕರಾಗಿ ಆಗಮಿಸಿದ ಲಕ್ಷ್ಮೇಶ್ವರ ತಾಲೂಕಿನ ಹುಲ್ಲೂರು ಸರಕಾರಿ ಪ್ರೌಢಶಾಲೆಯ ಶಿಕ್ಷಕರಾದ ಸಿದ್ಧಲಿಂಗೇಶ್ವರ ಹಲಸೂರು ತೋಂಟದಾರ್ಯ ಮಠದಲ್ಲಿ ನಡೆದ ನವೆಂಬರ್ ತಿಂಗಳ ವಿಶೇಷ ಶಿವಾನುಭವ ಕಾರ್ಯಕ್ರಮದಲ್ಲಿ ಕನ್ನಡದ ದಿಗ್ಗಜರು ವಿಷಯ ಕುರಿತು ಹಳಗನ್ನಡ, ನಡುಗನ್ನಡ, ಹಾಗೂ ಹೊಸಗನ್ನಡ ಸಾಹಿತಿಗಳ, ಕವಿಗಳ, ಸಾಹಿತ್ಯ ಕುರಿತು ಮಾತನಾಡಿದರು.

# ಪ್ರವಾಸೋದ್ಯಮ ಕುಸಿತ ಎಂದ ವ್ಯಕ್ತಿಯ ವಿರುದ್ಧ ಗೋವಾ ಅಧಿಕಾರಿಗಳು ದೂರು!



■ವಿಜಯಸಾಕ್ಷಿ ಸುದ್ದಿ, ಗೋವಾ

ರಾಜ್ಯದಲ್ಲಿ ಪ್ರವಾಸೋದ್ಯಮವು ಕುಸಿತ ಕಾಣುತ್ತಿದೆ ಎಂದು ಪ್ರತಿಪಾದಿಸಲು "ಸುಳ್ಳು ಅಂಕಿ-ಅಂಶಗಳನ್ನು" ಉಲ್ಲೇಖಿಸಿದ್ದಾರೆ ಎಂದು ಆರೋಪಿಸಿ ಗೋವಾ ಸರ್ಕಾರವು ವ್ಯಕ್ತಿಯೊಬ್ಬರ ವಿರುದ್ಧ ಶುಕ್ರವಾರ ಪೊಲೀಸ್ ದೂರು ದಾಖಲಿಸಿದೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ. ವ್ಯಕ್ತಿಯು ಲಂಡನ್ ಮೂಲದ ವಿಶ್ಲೇಷಣಾ ಕಂಪನಿಯಾದ CEIC ಡೇಟಾದ ಅಂಕಿಅಂಶಗಳನ್ನು ಉಲ್ಲೇಖಿಸಿ, "ಗೋವಾದಲ್ಲಿ ಪ್ರವಾಸೋದ್ಯಮವು ಕುಸಿಯುತ್ತಿದೆ" ಎಂದು ಹೇಳಿದ್ದರು. ಪ್ರವಾಸೋದ್ಯಮ ಕುಸಿತ ಗೋವಾದಲ್ಲಿ ವಿದೇಶಿ ಪ್ರವಾಸಿಗರ 2019 ಮತ್ತು 2023 ಅಂಕಿ ಅಂಶಗಳ ನಡುವಿನ ಹೋಲಿಕೆಯನ್ನು ಉಲ್ಲೇಖಿಸಿ ರಾಮಾನುಜ್ ಮುಖರ್ಜಿ ಅವರು ನವೆಂಬರ್ 5 ರಂದು ಟ್ವಿಟರ್‌ನಲ್ಲಿ ಪೋಸ್ಟ್ ಹಾಕಿದ್ದರು. ಅದರಲ್ಲಿ ಅವರು ವಿದೇಶಿ ಪ್ರವಾಸಿಗರು ಗೋವಾ ಬದಲಿಗೆ ಶ್ರೀಲಂಕಾದಂತಹ ಇತರ ಸ್ಥಳಗಳಿಗೆ ತೆರಳುತ್ತಿದ್ದಾರೆ ಎಂದು ಹೇಳಿಕೊಂಡಿದ್ದರು. ಭಾರತೀಯ ಪ್ರವಾಸಿಗರು ಗೋವಾಕ್ಕೆ ಇನ್ನೂ ಭೇಟಿ ನೀಡುತ್ತಿದ್ದಾರೆ. ಆದರೆ, ವಿದೇಶದಲ್ಲಿ ಗೋವಾದಂತೆಯೆ ಇರುವ ಹಲವಾರು ಅಗ್ಗದ ಸ್ಥಳಗಳಿರುವಾಗ ಮತ್ತು ಗೋವಾದಲ್ಲಿ ಪ್ರವಾಸಿಗರ ಶೋಷಣೆಯ ಬಗ್ಗೆಗಿನ ವಿಚಾರ ಹರಡಿದರೆ ಅವರು ಕೂಡಾ ಶೀಘ್ರದಲ್ಲೇ ಗೋವಾಗೆ ಭೇಟಿ ನೀಡುವುದನ್ನು ನಿಲ್ಲಿಸುತ್ತಾರೆ" ಎಂದು ಅವರು ಹೇಳಿದ್ದರು. ಲಂಡನ್ ಮೂಲದ ವಿಶ್ಲೇಷಣಾ ಕಂಪನಿಯಾದ ಅಇಖಅ ಡೇಟಾದ ಅಂಕಿಅಂಶಗಳನ್ನು ಉಲ್ಲೇಖಿಸಿ, "ಗೋವಾದಲ್ಲಿ ಪ್ರವಾಸೋದ್ಯಮವು ಕುಸಿತ ಕಂಡಿದೆ" ಎಂದು ಮುಖರ್ಜಿ ಉಲ್ಲೇಖಿಸಿದ್ದರು.

ಪ್ರವಾಸೋದ್ಯಮ ಕುಸಿತ

ಮುಖರ್ಜಿ ಅವರ ಪೋಸ್ಟ್‌ಗೆ ಪ್ರತಿಕ್ರಿಯೆಯಾಗಿ, ಹಲವಾರು ಸಾಮಾಜಿಕ ಮಾಧ್ಯಮ ಬಳಕೆದಾರರು ಗೋವಾದಲ್ಲಿ ವಿಶ್ವಾಸಾರ್ಹ ಸಾರಿಗೆ ಮತ್ತು ಸಮಂಜಸವಾದ ಹೋಟೆಲ್ ದರಗಳನ್ನು ಹುಡುಕಲು ಹೆಣಗಾಡುತ್ತಿರುವ ಅನುಭವಗಳ ಬಗ್ಗೆ ವಿವರಿಸಿದ್ದಾರೆ.

## 11 ದಿನಗಳಿಂದ ತಹಸೀಲ್ದಾರ ಕಚೇರಿಯ ಬಳಿ ನಡೆಯುತ್ತಿದ್ದ ಹೋರಾಟಕ್ಕೆ ತಾರ್ಕಿಕ ಅಂತ್ಯ

# ಪಿಎಸ್‌ಐ ಈರಪ್ಪ ರಿತ್ತಿ ವರ್ಗಾವಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಠಾಣೆ ಪಿಎಸ್‌ಐ ಈರಪ್ಪ ರಿತ್ತಿ ಅವರನ್ನು ವರ್ಗಾವಣೆ ಮಾಡಿದ ಹಿನ್ನೆಲೆಯಲ್ಲಿ ಅವರ ಅಮಾನತ್ತು ಇಲ್ಲವೇ ವರ್ಗಾವಣೆಗೆ ಆಗ್ರಹಿಸಿ ಕಳೆದ 11 ದಿನಗಳಿಂದ ಗೋಸಾವಿ ಸಮಾಜ ಮತ್ತು ಶ್ರೀರಾಮ ಸೇನೆ ಸಂಘಟನೆಯವರು ನಡೆಸುತ್ತಿರುವ ಹೋರಾಟ ಶನಿವಾರ ತಾರ್ಕಿಕ ಅಂತ್ಯ ಕಂಡಿತು.

ಅ.12ರಂದು ದಸರಾ ಹಬ್ಬದ ದುರ್ಗಾದೇವಿ ಮೆರವಣಿಗೆ ದಿನ ಮುಸ್ಲಿಂ ಯುವಕರು ಗೋಸಾವಿ ಸಮಾಜದ ಯುವಕರ ಮೇಲೆ ಹಲ್ಲೆ ಮಾಡಿದ್ದಾರೆಂದು ಮರುದಿನ ಗೋಸಾವಿ ಸಮಾಜದವರು ಠಾಣೆಗೆ ದೂರು ಕೊಡಲು ಹೋದಾಗ ಅವರ ಮೇಲೆಯೇ ಪಿಎಸ್‌ಐ ಈರಪ್ಪ ರಿತ್ತಿ ಲಾಠಿ ಪ್ರಹಾರ ಮಾಡಿದ್ದಾರೆಂದು ಆರೋಪಿಸಿ ಅ.19ರಂದು ಲಕ್ಷ್ಮೇಶ್ವರ ಬಂದ್ ಕರೆ ನೀಡಿ ಪಿಎಸ್‌ಐ ಅಮಾನತ್ತಿಗೆ ಆಗ್ರಹಿಸಲಾಗಿತ್ತು. ಇಷ್ಟಾಗಿಯೂ ಪಿಎಸ್‌ಐ ಮೇಲೆ ಯಾವುದೇ ಕ್ರಮವಾಗದ್ದರಿಂದ ಕಳೆದ 11 ದಿನಗಳಿಂದ ತಹಸೀಲ್ದಾರ ಕಚೇರಿಯ ಹೊರಗಡೆ ಅನಿರ್ದಿಷ್ಟಾವಧಿ ಸತ್ಯಾಗ್ರಹ ಕೈಗೊಂಡಿದ್ದರು.

ಸತ್ಯಾಗ್ರಹ ನಿರತರಿಗೆ ನೈತಿಕ ಬೆಂಬಲವಾಗಿ ನಿಂತಿದ್ದ ಶ್ರೀರಾಮಸೇನೆ ರಾಜ್ಯ ಪ್ರ. ಕಾರ್ಯದರ್ಶಿ ರಾಜು ಖಾನಪ್ಪನವರ ಶನಿವಾರ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಪ್ರತಿಭಟನೆ ಕೈಬಿಡುವಂತೆ ತಿಳಿಸಿದರು. ಈ ವೇಳೆ ಮಾತನಾಡಿದ ಅವರು, ನ್ಯಾಯ ಕೇಳಲು ಹೋದ ಗೋಸಾವಿ ಸಮಾಜದ ಯುವಕರು, ಮಹಿಳೆಯರನ್ನು ಬೈಕ್ ಮೇಲೆ ಬೆನ್ನಟ್ಟಿ ಹೊಡೆದಿದ್ದಾರೆ. ಅವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಮನವಿ ಮಾಡಿ, ನ್ಯಾಯಕ್ಕಾಗಿ ಶ್ರೀರಾಮಸೇನೆ ಕಟಿಬದ್ಧವಾಗಿದ್ದರಿಂದ ಕೊನೆಗೂ ಪಿಎಸ್‌ಐ ದುರ್ನಡತೆಯ ಸತ್ಯ ಅರಿತ ಹಿರಿಯ ಅಧಿಕಾರಿಗಳು ಅವರನ್ನು ವರ್ಗಾವಣೆ ಮಾಡಿರುವುದು ಸ್ವಾಗತಾರ್ಹ. ಆದರೆ ಕೆಲ ದಿನಗಳ ನಂತರ ಮತ್ತೆ ಅವರನ್ನು ಇಲ್ಲಿಗೆ ನಿಯೋಜಿಸಿದ್ದೇ ಆದಲ್ಲಿ ಪೊಲೀಸ್ ಠಾಣೆಯ ಮುಂದೆಯೇ ಹೋರಾಟ ನಡೆಸುತ್ತೇವೆ ಎಂದರು.





ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಪಿಎಸ್‌ಐ ಗೂಂಡಾ ವರ್ತನೆ ಖಂಡಿಸಿ ಗೋಸಾವಿ ಸಮಾಜ ಮತ್ತು ಶ್ರೀರಾಮಸೇನೆ ಸಂಘಟನೆಯವರು ನಡೆಸುತ್ತಿರುವ ಹೋರಾಟ ತಡೆಯುವ ನಿಟ್ಟಿನಲ್ಲಿ ಪಿಎಸ್‌ಐ ಅನೇಕ ಷಡ್ಯಂತ್ರ ನಡೆಸಿದರು. ತಾಲೂಕಾಡಳಿತವೂ ಸಹಿತ ಅಧಿಕಾರಿಯನ್ನು ಉಳಿಸಿಕೊಳ್ಳಲು 163 ಕಲಂ ಜಾರಿಗೊಳಿಸಿ ಕಾನೂನನ್ನು ದುರುಪಯೋಗಪಡಿಸಿಕೊಂಡಿದ್ದಾರೆ. ಇಲಾಖೆಯ ಮಾನ ಹರಾಜಾಗುತ್ತಿರುವುದನ್ನು ಮತ್ತು ಹೋರಾಟ ತೀವ್ರ ಸ್ವರೂಪ ಪಡೆಯುವುದನ್ನು ಅರಿತ ಹಿರಿಯ ಪೊಲೀಸ್ ಅಧಿಕಾರಿಗಳು ಪಿಎಸ್‌ಐ ವರ್ಗಾವಣೆಗೊಳಿಸಿರುವುದು ಸ್ವಾಗತಾರ್ಹ ಎಂದರು.

> ಲಕ್ಷ್ಮೇಶ್ವರ ಠಾಣೆಗೆ ಎಲ್ಲವನ್ನೂ ಸಮರ್ಥವಾಗಿ, ಸಮಾನವಾಗಿ ನಿಭಾಯಿಸುವ ಓರ್ವ ದಕ್ಷ ಪಿಎಸ್‌ಐ ನಿಯೋಜಿಸಿ. ಮುಖ್ಯವಾಗಿ ಅರ್‌ಟಿಓ ಕಚೇರಿಯಲ್ಲಿರುವಂತೆ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ನಾಲ್ಕೈದು ಜನ ಏಜೆಂಟರು ಠಾಣೆಯಲ್ಲಿಯೇ ಬಿಡಾರ ಹೂಡಿ ಪೊಲೀಸರ ಸಂವಿಧಾನ ಮತ್ತು ಕಾನೂನಾತ್ಮಕ ಹುದ್ದೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇದರಿಂದ ಪೊಲೀಸ್ ಇಲಾಖೆ ಮತ್ತು ಅಧಿಕಾರಿಗಳ ಗೌರವಕ್ಕೆ ಧಕ್ಕೆಯಾಗುತ್ತಿದೆ. ಪೊಲೀಸ್ ವರಿಷ್ಠಾಧಿಕಾರಿಗಳು ಅವರು ಇದಕ್ಕೆ ಕೂಡಲೇ ಕಡಿವಾಣ ಹಾಕಿಸಬೇಕು.
>
> – ಡಾ. ಚಂದ್ರು ಲಮಾಣಿ. ಶಾಸಕರು, ಶಿರಹಟ್ಟಿ.

ಈ ಸಂದರ್ಭದಲ್ಲಿ ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಶ್ರೀರಾಮಸೇನೆ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಬಸವರಾಜ ಚಕ್ರಸಾಲಿ, ಪ್ರಾಣೇಶ ವ್ಯಾಪಾರಿ, ಬಾಳಪ್ಪ ಗೋಸಾವಿ, ಹರೀಶ ಗೋಸಾವಿ, ನವೀಣ ಬೆಳ್ಳಟ್ಟಿ, ಅನಿಲ ಮುಳಗುಂದ, ನೀಲಪ್ಪ ಹತ್ತಿ, ಎಂ.ಆರ್. ಪಾಟೀಲ, ಶಕ್ತಿ ಕತ್ತಿ, ಗಿರೀಶ ಚೌರಟ್ಟಿ ಸೇರಿದಂತೆ ಶ್ರೀರಾಮಸೇನೆ ಕಾರ್ಯಕರ್ತರು, ಗೋಸಾವಿ ಸಮಾಜದವರಿದ್ದರು.

# ಜನಪದ ಕಲೆ ಮರೆಯಾಗುತ್ತಿದೆ

▶▶ ಮೊದಲನೇ ಪುಟದಿಂದ

ಜಂತ್ಲಿಶಿರೂರ ಗ್ರಾಮದ ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಉಪನ್ಯಾಸ ನೀಡುತ್ತಾ, ಜನಪದ ಕಲಾವಿದರಿಗೆ ವಿಜಯನಗರ ಸಾಮ್ರಾಜ್ಯದಲ್ಲಿಯೇ ಗೌರವವಿತ್ತು. ನಮ್ಮ ಸಂಸ್ಕೃತಿ, ಸಂಪ್ರದಾಯವನ್ನು ಕಟ್ಟಿಕೊಡುವ ಶಕ್ತಿ ಜಾನಪದ ಕಲೆಗಿದೆ. ಆದ್ದರಿಂದ ವಿದ್ಯಾರ್ಥಿಗಳು ಮೊಬೈಲಿನಿಂದ ದೂರವಿದ್ದು, ಜನಪದ ಕಲೆಯತ್ತ ಗಮನ ಹರಿಸಿ. ನಮ್ಮ ಜಿಲ್ಲೆಯವರೇ ಜಾನಪದ ಅಕಾಡೆಮಿಯ ಸದಸ್ಯರಾಗಿದ್ದು ತಮಗೆಲ್ಲಾ ಮಾರ್ಗದರ್ಶನ ಮಾಡುತ್ತಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ವೈ.ಎಚ್. ತೆಕ್ಕಲಕೋಟಿ ಮಾತನಾಡಿ, ಆಧುನಿಕತೆಯ ಭರಾಟೆಯಲ್ಲಿ ಜಾನಪದ ಕಲೆಯು ಮುಳುಗಬಾರದು. ಈಗಿರುವ ಪೀಳಿಗೆಯು ಈ ಕಲೆಯನ್ನು ಕಲಿತು ಮುಂದಿನ ಪೀಳಿಗೆಗೂ ಕಲಿಸಬೇಕು ಎಂಬ ಸದುದ್ದೇಶದಿಂದ ನುಲಿ ಚಂದಯ್ಯ ಜಾನಪದ ಕಲಾ ಮೇಳವು ಈ ಕಾರ್ಯಕ್ರಮವನ್ನು ಆಯೋಜಿಸಿದೆ ಎಂದರು.


ಜಾನಪದ ಅಕಾಡೆಮಿ ಪುರಸ್ಕೃತ ಬಸವರಾಜ ಹಡಗಲಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿದ್ದ ಕಲಾವಿದರು ಜಾನಪದ ಹಾಡುಗಳೊಂದಿಗೆ ವಿದ್ಯಾರ್ಥಿಗಳ ಮನರಂಜಿಸಿದರು. ಕಲಾವಿದ ಗೌಡಪ್ಪ ಬೊಮ್ಮಪ್ಪನವರ ಬಸನಗೌಡ ಪಾಟೀಲ ವೇದಿಕೆಯಲ್ಲಿದ್ದರು. ಅಶೋಕ ಕಳಸದ ಸ್ವಾಗತಿಸಿದರು. ಎಸ್.ಎಚ್. ಶೆಟ್ಟಿನಾಯ್ಕರ ನಿರೂಪಿಸಿದರು. ನುಲಿ ಚಂದಯ್ಯ ಜಾನಪದ ಕಲಾ ಮೇಳದ ಅಧ್ಯಕ್ಷ ಶಿವು ಭಜಂತ್ರಿ ವಂದಿಸಿದರು.

# ಎಲ್ಲರಿಗೂ ಕಾನೂನು ಜ್ಞಾನ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಯಾವುದೇ ಒಂದು ವಿಷಯಕ್ಕೆ ಸಂಬಂಧಿಸಿದಂತೆ ವಾಸ್ತವಾಂಶ ಗೊತ್ತಿಲ್ಲ ಎಂದು ಹೇಳಿದರೆ ಕ್ಷಮೆಯಿದೆ. ಆದರೆ ನನಗೆ ಕಾನೂನಿನ ಕುರಿತು ಗೊತ್ತಿಲ್ಲ ಎಂದು ಹೇಳಿದರೆ ಯಾರನ್ನೂ ಕಾನೂನು ಕ್ಷಮಿಸುವುದಿಲ್ಲ ಎಂದು ನ್ಯಾಯವಾದಿ ಕೆ.ಎಲ್. ಕರಿಗೌಡರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಯಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬರಿಗೂ ದೈನಂದಿನ ಜೀವನಕ್ಕೆ ಅನ್ವಯವಾಗುವ ಸಾಮಾನ್ಯ ಕಾನೂನು ಮಾಹಿತಿ ಹಾಗೂ ಸೇವೆಗಳ ಕುರಿತು ಅರಿವು ಇರಬೇಕು. ಪ್ರತಿ ಪ್ರಜೆ ಶಿಕ್ಷಣ ಪಡೆಯಬೇಕು. ಶಿಕ್ಷಣದಿಂದ ಜ್ಞಾನ ವೃದ್ಧಿಯಾಗುತ್ತದೆ. ಜ್ಞಾನದಿಂದ ಕಾನೂನಿನ ತಿಳುವಳಿಕೆ ಹೆಚ್ಚುತ್ತದೆ. ತಮಗೆ ಬೇಕಾದ ಹಕ್ಕು ಮತ್ತು ನ್ಯಾಯ ಪಡೆಯಲು ಸಾಧ್ಯವಾಗುತ್ತದೆ. ರಾಜ್ಯ, ದೇಶ, ಸ್ಥಳೀಯ ಪ್ರದೇಶ, ಸಮಾಜದ ಉದ್ಧಾರಕ್ಕೆ ಕಾನೂನು ಸೇವೆಗಳು ಮಹತ್ವದ ಪಾತ್ರ ವಹಿಸುತ್ತದೆ ಎಂದರು.





ನ್ಯಾಯವಾದಿ ಮತ್ತು ಮಕ್ಕಳ ಕಲ್ಯಾಣ ಸಮಿತಿ ಸದಸ್ಯ ಬಿ.ಎನ್. ಸಂಶಿ ಮಾತನಾಡಿ, ಕಾನೂನಿನ ಸೇವೆಗಳು ಇರುವುದರಿಂದ ನಮ್ಮ ಹಕ್ಕು ಮತ್ತು ನ್ಯಾಯಗಳನ್ನು ಪಡೆದುಕೊಳ್ಳಲು ಸಹಕಾರಿಯಾಗುತ್ತೆ. ದುರ್ಬಲರಿಗೆ ಹಾಗೂ ಆರ್ಥಿಕವಾಗಿ ಹಿಂದುಳಿದವರಿಗೆ ಸರಕಾರ ಕಾನೂನು ನೆರವು ನೀಡುತ್ತಿದ್ದು, ಅವುಗಳ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಮಕ್ಕಳು ಈ ಹಂತದಲ್ಲೇ ಕಾನೂನಿನ ಅರಿವು ಹೊಂದಬೇಕು ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಚ್. ಮಾನೇಗಾರ, ಮಾಹಾಂತೇಶ ಕೆಂಚನಾಯ್ಕರ್, ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ, ಎಸ್.ವಿ. ತಿಮ್ಮಾಪೂರ, ನೂರಹ್ಮದ ನದಾಫ್, ಎಲ್.ಡಿ. ರಾಠೋಡ, ಬಸವರಾಜ ಗೌರಿಮನಿ ಇದ್ದರು.





ಗದಗ ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಹಿರಿಯ ಶಿಕ್ಷಕಿ ರೇಣುಕಾ ವೆಂಕಟಾಪುರ, ಸಮಾಜ ವಿಜ್ಞಾನ ಶಿಕ್ಷಕಿ ಗಾಯತ್ರಿ ಅಸುಂಡಿ ಹಾಗೂ ಸುಮಂಗಲಾ ಆಸಂಗಿ, ಶಿಕ್ಷಕ ವೃಂದ, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನಿಧನ



**ಡಾ. ವಾಮನಮೂರ್ತಿ ಕುಲಕರ್ಣಿ**

ಗದಗ: ಸ್ಥಳೀಯ ಹುಡ್ಕೋ ಕಾಲೋನಿ ನಿವಾಸಿ ಡಾ. ವಾಮನಮೂರ್ತಿ ಕುಲಕರ್ಣಿ (88) ಶನಿವಾರ ಮಧ್ಯಾಹ್ನ ನಿಧನರಾದರು. ಮೃತರು ನಗರದ ವೈದ್ಯೆ ಸವಿತಾ ಹೊಂಬಾಳಿಯವರ ತಂದೆಯಾಗಿದ್ದು, ಪತ್ನಿ ಹಾಗೂ ಈರ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದು, ಮೃತರ ಅಂತಿಮಯಾತ್ರೆ ಭಾನುವಾರ ಬೆಳಿಗ್ಗೆ 8 ಗಂಟೆಗೆ ಸ್ವಗೃಹದಿಂದ ಹೊರಡಲಿದೆ.

# ಮಕ್ಕಳ ಪ್ರತಿಭೆ ಗುರುತಿಸಲು ಪ್ರತಿಭಾ ಕಾರಂಜಿ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಲೋತ್ಸವ ಮತ್ತು ಪ್ರತಿಭಾ ಕಾರಂಜಿ ಕಾರ್ಯಕ್ರಮಗಳು ಮಕ್ಕಳ ಪ್ರತಿಭೆಯನ್ನು ಗುರುತಿಸಲು ಸಹಕಾರಿಯಾಗುತ್ತವೆ. ಆದ್ದರಿಂದ ಮಕ್ಕಳ ಉತ್ಸಾಹವನ್ನು ಕುಂಠಿಸದೆ ಅವರಲ್ಲಿನ ಪ್ರತಿಭೆಗೆ ಮನ್ನಣೆ ನೀಡಬೇಕಾದುದು ಪಾಲಕರ ಮತ್ತು ಶಿಕ್ಷಕರ ಆದ್ಯ ಕರ್ತವ್ಯವಾಗಿದೆ ಎಂದು ಎಸ್.ಎ.ವ್ಹಿ.ವ್ಹಿ.ಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಅಭಿಪ್ರಾಯಪಟ್ಟರು.



ಅವರು ಗದಗ ಜಿಲ್ಲಾ ಪಂಚಾಯಿತಿ, ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಕಛೇರಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಪಟ್ಟಣದ ಎಸ್.ಎ.ವ್ಹಿ.ವ್ಹಿ.ಪಿ ಸಮಿತಿಯ ವಿದ್ಯಾ ಸಂಸ್ಥೆಯಲ್ಲಿ ಶುಕ್ರವಾರ ಆಯೋಜಿಸಿದ್ದ 2024-25ನೇ ಸಾಲಿನ ನರೇಗಲ್ಲ ಕ್ಲಸ್ಟರ್ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿ ಮಗುವಿನಲ್ಲೂ ಒಂದಲ್ಲ ಒಂದು ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಅನಾವರಣ ಮಾಡುವ ಮೂಲಕ ಅವರ ಸರ್ವಾಂಗೀಣ ಬೆಳವಣಿಗೆಗೆ ಅವಕಾಶ ಕಲ್ಪಿಸಬೇಕು. ಗ್ರಾಮೀಣ ಮಕ್ಕಳು ಕಾರ್ಯಕ್ರಮದ ಪ್ರಯೋಜನ ಪಡೆಯಬೇಕು. ಕೀಳರಿಮೆ ಬಿಟ್ಟು ತಮ್ಮಲ್ಲಿನ ಪ್ರತಿಭೆಯನ್ನು ಇತರ ಮಕ್ಕಳ ಎದುರು ಪ್ರದರ್ಶಿಸಿ ಮೆಚ್ಚುಗೆಗೆ ಪಾತ್ರರಾಗಬೇಕು ಎಂದರು.

ಕೆವಿಬಿಎಮ್ ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಗಿ, ಎಸ್.ಎ. ಬಾಲಕಿಯರ ಪ್ರೌಢಶಾಲಾ ಮುಖ್ಯೋಪಾಧ್ಯಾಯ ಎಸ್. ಎನ್. ಹೂಲಗೇರಿ, ಎಸ್.ಎ. ಬಾಲಕರ ಪ್ರೌಢಶಾಲಾ ಮುಖ್ಯೋಪಾಧ್ಯಾಯ ಎಮ್.ಬಿ. ಸಜ್ಜನ, ಶ್ರೀಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಬಿ.ಜಿ. ಶಿರ್ಸಿ ಎಸ್.ಎ.ವ್ಹಿ.ವ್ಹಿ.ಪಿ ಸಮಿತಿಯ ಆಡಳಿತ ಮಂಡಳಿಯ ಸದಸ್ಯ ನಿಂಗನಗೌಡ ಲಕ್ಕನಗೌಡ್ರ, ನರೇಗಲ್ಲ ಸಿಆರ್‌ಪಿ ಜ್ಯೋತಿ ಬೇಲೇರಿ, ಕ್ಲಸ್ಟರ್ ವ್ಯಾಪ್ತಿಯ ಎಲ್ಲ ಶಿಕ್ಷಕರು ಸೇರಿದಂತೆ ಇನ್ನಿತರರು ಇದ್ದರು. ಶಿಕ್ಷಕ ಎಮ್.ವಿ. ಬಿಂಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆ.ಐ. ಕೋಳಿವಾಡ ನಿರೂಪಿಸಿದರು. ಐ.ಬಿ. ಒಂಟೆಲಿ ವಂದಿಸಿದರು.

# ಎತ್ತರ ಜಿಗಿತದಲ್ಲಿ 3ನೇ ಸ್ಥಾನ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಅಂತರ ಕಾಲೇಜುಗಳ ಅಥ್ಲೆಟಿಕ್ಸ್ ಒಕ್ಕೂಟದ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹುಬ್ಬಳ್ಳಿಯಲ್ಲಿ ನಡೆದ 22ನೇ ವಾರ್ಷಿಕೋತ್ಸವದ ಕ್ರೀಡಾ ಮಿಲನದಲ್ಲಿ ಹುಲಕೋಟಿಯ ಆರ್‌ಎಮ್‌ಎಸ್‌ಎಸ್ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ಕಾಲೇಜಿನ ವಿದ್ಯಾರ್ಥಿನಿ ವಾಣಿಶ್ರೀ ಎತ್ತರ ಜಿಗಿತದಲ್ಲಿ 3ನೇ ಸ್ಥಾನವನ್ನು ಪಡೆದು ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಸಾಧಕ ವಿದ್ಯಾರ್ಥಿನಿಯನ್ನು ಆರ್‌ಎಮ್‌ಎಸ್‌ಎಸ್ ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ, ಸೆಕ್ರೆಟರಿ ಡಾ. ವೇಮನ್ ಸಾವಕಾರ್, ಸಂಸ್ಥೆಯ ಶೈಕ್ಷಣಿಕ ಮಂಡಳಿಯ ಸದಸ್ಯರು, ಕಾಲೇಜಿನ ಪ್ರಾಂಶುಪಾಲರು, ಶಿಕ್ಷಕ ವೃಂದ ಮತ್ತು ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.


## ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಗದಗ

ಜಿಲ್ಲಾ : ಗದಗ ಪಿನ್‌ಕೋಡ್-582101 ರಾಜ್ಯ : ಕರ್ನಾಟಕ

ಇ-ಮೇಲ್ : apmcgadag4@gmail.com (08372) ದೂ : 238354, ಫ್ಯಾಕ್ಸ : 237897

ಸಂ: ಕೃಉಮಾಸ:ಗ: 491/2024-2025 ದಿನಾಂಕ : 08-10-2024

**ಪ್ರಕಟಣೆ**

ಈ ಮೂಲಕ ಯಾವತ್ತೂ ರೈತಬಾಂಧವರಿಗೆ, ಮತ್ತು ಪೇಟೆ ಕಾರ್ಯಕರ್ತರಿಗೆ ತಿಳಿಯಪಡಿಸುವದೇನೆಂದರೆ, ಮೆ: ಅರಿಹಂತ ಟ್ರೇಡಿಂಗ್ ಕಂಪನಿ ಸಾ: ಗದಗ ಇವರು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಹೊಂದಿರುವ ತಮ್ಮ ನಿವೇಶನ ಸಂಖ್ಯೆ: 48 ರ (ಅರ್ಧಭಾಗ) ದಕ್ಷಿಣ ಭಾಗ ಹಾಗೂ ಅದರಲ್ಲಿರುವ ಕಟ್ಟಡವನ್ನು ಅರಿಹಂತ ಸ್ಪೈಸಸ್ ಖರೀದಿದಾರರು ಸಾ: ಗದಗ ಇವರಿಗೆ ವರ್ಗಾವಣೆ/ಮಾರಾಟ ಮಾಡಲು ಸಮಿತಿಯ ಅನುಮತಿ ಕೋರಿರುತ್ತಾರೆ. ಕಾರಣ ಈ ಕುರಿತು ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಪ್ರಕಟಣೆ ದಿನಾಂಕದಿಂದ 15 ದಿನಗಳ ಒಳಗಾಗಿ ಸಮಿತಿಯ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬಂದ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/- **ಕಾರ್ಯದರ್ಶಿ** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ

ಸಹಿ/- **ಆಡಳಿತಾಧಿಕಾರಿಗಳು** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗದಗ



## ರೋಣ ಸಂಜೀವಿನಿ ಮಹಿಳಾ ಕಿಸಾನ್ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್(ರಿ.)

REGISTER NO : U01500KA2024PTC183845

**ರೋಣ - 582209**

ಎನ್.ಆರ್.ಎಲ್.ಎಂ- ಸಂಜೀವಿನಿ ಯೋಜನೆಯಡಿ ರಚಿಸಲಾಗಿರುವ ರೋಣ ಸಂಜೀವಿನಿ ಮಹಿಳಾ ಕಿಸಾನ್ ರೈತ ಉತ್ಪಾದಕ ಕಂಪನಿ ಲಿಮಿಟೆಡ್‌ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (CEO) ಮತ್ತು ಲೆಕ್ಕಿಗರನ್ನು (Accountant) ನೇಮಕಾತಿ ಮಾಡಿಕೊಳ್ಳಲು ಮಾನ್ಯ ಅಭಿಯಾನ ನಿರ್ದೇಶಕರು, ಬೆಂಗಳೂರು: KSRLPS/ UCD/ MKPC/1/ 2024VCD-KSRLPS (E-95705) ದಿನಾಂಕ:28-06-2024ರ ಹಾಗೂ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಗದಗ ರವರ ಪತ್ರ ಸಂಖ್ಯೆ: ಗ.ಜಿ.ಪಂ.ಪಿಡಿ-01/2024-25 ದಿನಾಂಕ:08-08-2024 ರ ಪತ್ರದ ಮಾರ್ಗಸೂಚಿಯಂತೆ ನೇಮಕಾತಿ ಆಯ್ಕೆ ಮಾಡಿಕೊಳ್ಳಬೇಕಾಗಿರುತ್ತದೆ.

**ಬೇಕಾಗಿದ್ದಾರೆ**

ರೋಣ ಸಂಜೀವಿನಿ ಮಹಿಳಾ ಕಿಸಾನ್ ರೈತ ಉತ್ಪಾದಕ ಕಂಪನಿ ಲಿಮಿಟೆಡ್‌ಗೆ ಈ ಕೆಳಗಿನ ಎರಡು ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

| ಕ್ರ.ಸಂ | ಹುದ್ದೆಯ ಹೆಸರು | ಹುದ್ದೆಯ ಸಂಖ್ಯೆ | ಕೆಲಸದ ಸ್ಥಳ | ಮಾಸಿಕ ವೇತನ | ಕೆಲಸದ ಅವಧಿ | ವಯಸ್ಸಿನ ಮಿತಿ |
|---|---|---|---|---|---|---|
| 1 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (CEO) | 01 | ಕಂಪನಿಯ ಕಾರ್ಯಚರಣೆ ವ್ಯಾಪ್ತಿ (ರೋಣ ತಾಲ್ಲೂಕು) | ರೂ. 25,000/- | 36 ತಿಂಗಳು | ಗರಿಷ್ಠ 35 ವರ್ಷ |
| 2 | ಲೆಕ್ಕಿಗರು (Accountant) | 01 | ಕಂಪನಿಯ ಕಾರ್ಯಚರಣೆ ವ್ಯಾಪ್ತಿ (ರೋಣ ತಾಲ್ಲೂಕು) | ರೂ. 10,000/- | 36 ತಿಂಗಳು | ಗರಿಷ್ಠ 35 ವರ್ಷ |

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (CEO) ವಿದ್ಯಾರ್ಹತೆ :**

1. ಕೃಷಿ (Agriculture) /ಕೃಷಿ ಮಾರ್ಕೆಟಿಂಗ್ (Agri-Marketing) / ಅಗ್ರಿ ಬಿಸಿನೆಸ್ ಮ್ಯಾನೇಜ್ಮೇಂಟ್ (Agri Business Management / JA.©.J (MBA)/ ಇತರೆ ಕೃಷಿ ಸಂಬಂಧಿತ ಪದವಿ/ ಸ್ನಾತಕೋತ್ತರ ಪದವಿ ಹೊಂದಿದರೆ ಸಂಬಂಧಿತ ಕ್ಷೇತ್ರದಲ್ಲಿ ಒಂದು ವರ್ಷದ ಅನುಭವ ಹೊಂದಿರಬೇಕು) ಇತರೆ ಸ್ನಾತಕ / ಸ್ನಾತಕೋತ್ತರ ಪದವಿ ಹೊಂದಿದರೆ ಕನಿಷ್ಠ ಎರಡು ವರ್ಷ ಮಾರುಕಟ್ಟೆ ನಿರ್ವಹಣೆ (Sales And Marketing) ಅಥವಾ ಸಂಬಂಧಿತ ಕೆಲಸದ ಅನುಭವ ಹೊಂದಿರಬೇಕು. ರೈತ ಉತ್ಪಾದಕರ ಕಂಪನಿಯಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದವರಿಗೆ ಪ್ರಥಮ ಅದ್ಯತೆ ನೀಡಲಾಗುವುದು ಅಥವಾ ಕೃಷಿ (Agriculture) ಕೃಷಿ ಮಾರ್ಕೆಟಿಂಗ್ (Agri-Marketing) ಕೃಷಿ ವ್ಯಾಪಾರೋದ್ಯಮ (Agri Business Management) ಡಿಪ್ಲೊಮೊ ಅಥಾವ ಮಾರ್ಕೆಟಿಂಗ್ ನಲ್ಲಿ BBA/MBA, Bcom/Mcom ಅಥವಾ ಯಾವುದೇ ಪದವಿ ಜೊತೆಗೆ ಕನಿಷ್ಠ ಎರಡು ವರ್ಷಗಳ FPO ಸಂಭಂದಿತ ಕೆಲಸದ ಅನುಭವ/ ಕೃಷಿ ಮಾರುಕಟ್ಟೆ/ ಸಾಮನ್ಯ ಮಾರುಕಟ್ಟೆ ನಿರ್ವಹಣೆ (Sale and Marketing) ಕೆಲಸದ ಅನುಭವ ಹೊಂದಿರಬೇಕು.
2. ವ್ಯಾಪಾರ ಮತ್ತು ಲೆಕ್ಕಚಾರಗಳ ಪರಿಜ್ಞಾನ, ಮಾತುಗಾರಿಗೆ, ಸಂವಹನ ಕಲೆ, ನಾಯಕತ್ವದ ಗುಣ ಹಾಗೂ ಅತ್ಯುತ್ತಮ ಕಂಪ್ಯೂಟರ್ ಕೌಶಲ್ಯಗಳನ್ನು ಕಡ್ಡಾಯವಾಗಿ ಹೊಂದಿರಬೇಕು.
3. ಕಂಪನಿಯ ಕಾರ್ಯಗಳಿಗೆ ಅನುಗುಣವಾಗಿ ನಿರಂತರವಾಗಿ ಕ್ಷೇತ್ರ ಭೇಟಿ ಮಾಡಲು ಸಿದ್ದರಿರಬೇಕು.
4. ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಹಿಡಿತ ಹೊಂದಿರಬೇಕು (ಓದಲು ಮತ್ತು ಬರೆಯಲು).

**ಲೆಕ್ಕಿಗರು (Accountant) ವಿದ್ಯಾರ್ಹತೆ :**

1. Bcom / Mcom / BBA ಪದವಿ / ಸ್ನಾತಕ ಪದವಿ ಪಡೆದಿರಬೇಕು.
2. ಟ್ಯಾಲಿ / ಸಿ.ಆರ್.ಎಂ ಟೂಲ್‌ಗಳ ನಿರ್ವಹಣೆಯ ಅಥವಾ ಲೆಕ್ಕ ಪರಿಶೋಧನೆಗೆ ಸಂಬಂಧಿಸಿದ ಕೆಲಸದ ಅನುಭವ ಹೊಂದಿರುವವರಿಗೆ ಮೊದಲ ಅದ್ಯತೆ ನೀಡಬೇಕು.
3. ವ್ಯವಹಾರ ಮತ್ತು ಲೆಕ್ಕಚಾರಗಳ ಪರಿಜ್ಞಾನ, ಮಾತುಗಾರಿಗೆ, ಸಂವಹನ ಕಲೆ, ನಾಯಕತ್ವದ ಗುಣ ಹಾಗೂ ಅತ್ಯುತ್ತಮ ಕಂಪ್ಯೂಟರ್ ಕೌಶಲ್ಯಗಳನ್ನು ಕಡ್ಡಾಯವಾಗಿ ಹೊಂದಿರಬೇಕು.
4. ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಹಿಡಿತ ಹೊಂದಿರಬೇಕು (ಓದಲು ಮತ್ತು ಬರೆಯಲು).

**ಸೂಚನೆಗಳು :**

ಅಭ್ಯರ್ಥಿಗಳು ಅರ್ಜಿಯನ್ನು ತಮ್ಮ ಬಯೋ-ಡೇಟಾ (Resume), ಭಾವಚಿತ್ರ ಮತ್ತು ಸೂಕ್ತ ದಾಖಲತಿಗಳನ್ನು ಗೆಜೆಟೆಡ್ ಅಧಿಕಾರಿಗಳ ದೃಢೀಕರಣದೊಂದಿಗೆ ಕಡ್ಡಾಯವಾಗಿ ಪೋಸ್ಟ್ ಅಥವಾ ಕೊರಿಯರ್ ಮುಖಾಂತರ ದಿನಾಂಕ: 12-11-2024ರ ಸಮಯ ಸಂಜೆ 5.30 ರೊಳಗೆ ತಾಲ್ಲೂಕು ಪಂಚಾಯಿತಿ ರೋಣ - 582209 (ದೂರವಾಣಿ ಸಂಖ್ಯೆ: 9480752359) ಇಲ್ಲಿಗೆ ತಲಪುವಂತೆ ಕಳುಹಿಸುವುದು ಅಥವಾ ಖುದ್ದಾಗಿ ಕಛೇರಿಗೆ ಬಂದು ಅರ್ಜಿಗಳನ್ನು ಸಲ್ಲಿಸುವುದು. ಒಂದು ವೇಳೆ ಪೋಸ್ಟ್ ಅಥವಾ ಕೊರಿಯರ್ ಮುಖಾಂತರ ಸಲ್ಲಿಸುವ ಅರ್ಜಿಗಳು ಮೇಲ್ಕಂಡ ದಿನಾಂಕದೊಳಗೆ ಕಛೇರಿಗೆ ತಲುಪಬೇಕು, ನಂತರ ಬರುವ ಅರ್ಜಿಗಳನ್ನು ಮಾನ್ಯ ಮಾಡುವುದಿಲ್ಲ.

ಸಹಿ/-
**ನಿರ್ದೇಶಕರು,**
**ರೋಣ ಸಂಜೀವಿನಿ ಮಹಿಳಾ ರೈತ ಉತ್ಪಾದಕರ ಕಂಪನಿ (ರಿ.)**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka